ಸಂಪುಟ : 9 ಸಂಚಿಕೆ 174 ಪುಟ : 4 ಬೆಲೆ: 3.00 ಶುಕ್ರವಾರ ಆಗಸ್ಟ್ 16 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 174 Pages : 4 Price : 3.00 Friday August 16 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿದ ಸಚಿವ ಎಚ್.ಕೆ. ಪಾಟೀಲ

## ಸ್ವಾತಂತ್ರ್ಯ ಸಂಗ್ರಾಮದಲ್ಲಿ ಗದಗ ಜಿಲ್ಲೆಯ ಪಾತ್ರ ಅವಿಸ್ಮರಣೀಯ

**■ವಿಜಯಸಾಕ್ಷಿ ಸುದ್ದಿ, ಗದಗ**

ನಮ್ಮ ಸ್ವಾತಂತ್ರ್ಯ ಸೇನಾನಿಗಳ ತ್ಯಾಗ, ಬಲಿದಾನ, ಶ್ರಮ ಸಮರ್ಪಣಾ ಭಾವದ ಫಲವಾಗಿ ನಮಗೆ ಸ್ವಾತಂತ್ರ್ಯ ದೊರಕಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಗುರುವಾರ ಜಿಲ್ಲಾಡಳಿತದಿಂದ ಜರುಗಿದ 78ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯಲ್ಲಿ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿ, ಶತಮಾನಗಳ ದಾಸ್ಯತ್ವವನ್ನು ಕಳಚಿ ಸ್ವತಂತ್ರವಾದ ಭಾರತ, ತನ್ನ 77 ವರ್ಷಗಳನ್ನು ಪೂರ್ಣಗೊಳಿಸಿ, ಇಂದು 78ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿದೆ ಎಂದರು.

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ತೋರಿದ ವಿನೂತನವಾದ ಸತ್ಯ, ಅಹಿಂಸೆ ಎಂಬ ಅಸ್ತ್ರಗಳನ್ನು ಹಿಡಿದು, ಸತ್ಯಾಗ್ರಹ ಮಾರ್ಗ ತುಳಿದು ಬ್ರಿಟೀಷ್ ಆಡಳಿತದ ಗುಂಡಿಗೆ ಎದೆ ಒಡ್ಡಿ, ಲಾಠಿ ಏಟು ತಿಂದು ಜೈಲಿನಲ್ಲಿ ನೊಂದು, ಬ್ರಿಟಿಷರು ನೀಡಿದ ನೋವಿನಲ್ಲಿ ಬೆಂದು, ಅವರ್ಣನೀಯ ಕಷ್ಟಗಳನ್ನು ಅನುಭವಿಸಿ, ದೇಶವನ್ನು ಗುಲಾಮಗಿರಿಯ ಸಂಕೋಲೆಯಿಂದ ಮುಕ್ತಗೊಳಿಸಿದರು. ಸತ್ಯಾಗ್ರಹವು ಸ್ವಾತಂತ್ರ್ಯ ಸಂಗ್ರಾಮ ಮತ್ತು ತದನಂತರ ಸ್ವಾತಂತ್ರ್ಯೋತ್ತರ ಭಾರತದಲ್ಲಿ ಪ್ರಬಲ ಅಸ್ತ್ರವಾಗಿ ಪರಿಣಮಿಸಿ ಅನೇಕ ಆಂದೋಲನ ಮತ್ತು ಚಳವಳಿಗಳಿಗೆ ಯಶ ತಂದುಕೊಡುವಲ್ಲಿ ಪರಿಣಾಮಕಾರಿಯಾದ ಪಾತ್ರ ನಿಭಾಯಿಸಿತ್ತು ಎಂದು ಹೇಳಿದರು.

> 1942ರಲ್ಲಿ, ಬ್ರಿಟೀಷರೇ ಭಾರತ ಬಿಟ್ಟು ತೊಲಗಿ ಚಳವಳಿಯಲ್ಲಿ ಗದಗ ಜಿಲ್ಲೆ ಪೂರ್ಣವಾಗಿ ತೊಡಗಿಸಿಕೊಂಡಿತ್ತು. ಡಾ. ಬಿ.ಜಿ. ಹುಲಗಿ, ಶಂಕ್ರಪ್ಪ ಗುಡ್ಡದ, ಇಸ್ಮಾಯಿಲ್ ಸಾಹೇಬ ಕಲ್ಲೂರ ರಾಮಾಚಾರಿ, ವೆಂಕಟೇಶ ಮಾಗಡಿ, ಕೋಗನೂರು ನಿಂಗಪ್ಪ ಮೊದಲಾದವರು ಕಠಿಣ ಶಿಕ್ಷೆ ಅನುಭವಿಸಿದರು. 1931ರಲ್ಲಿ ಜವಹಾರಲಾಲ ನೆಹರು ಅವರು ಗದಗ ಮತ್ತು ಜಕ್ಕಲಿ ಗ್ರಾಮಕ್ಕೆ ಭೇಟಿ ನೀಡಿದಾಗ ಅಂದಿನ ಹೋರಾಟದ ನಾಯಕತ್ವ ವಹಿಸಿದ್ದ ಅಂದಾನೆಪ್ಪ ದೊಡ್ಡಮೇಟಿ ಅವರು ನೆಹರೂ ಅವರಿಗೆ ಬೆಳ್ಳಿಯ ತಕ್ಕಡಿಯನ್ನು ಅರ್ಪಿಸಿದ್ದು ವಿಶೇಷ ಘಟನೆಯಾಗಿದೆ.
>
> **– ಎಚ್.ಕೆ. ಪಾಟೀಲ.**
> **ಜಿಲ್ಲಾ ಉಸ್ತುವಾರಿ ಸಚಿವರು.**



ನರಗುಂದದ ಬಾಬಾ ಸಾಹೇಬ, ಮುಂಡರಗಿಯ ಭೀಮರಾವ, ಡಂಬಳದ ಕೆಂಚನಗೌಡ್ರು, ಅನಂತರಾವ ಜಾಲಿಹಾಳ, ಡಾ. ವಾಸುದೇವರಾವ ಉಮಚಗಿ, ಬೆಟಗೇರಿಯ ತ್ರಿಮಲ್ಲೆ, ಮಳೇಕರ, ಜಯರಾಮಾಚಾರ್ಯ ಮಳಗಿ, ಡಂಬಳದ ಶ್ರೀನಿವಾಸರಾವ್ ಕಳ್ಳಿ, ತಿಪ್ಪಣ್ಣ ಶಾಸ್ತ್ರೀ, ಅಂದಾನಪ್ಪ ದೊಡ್ಡಮೇಟಿ, ಕೌತಾಳ ವೀರಪ್ಪ, ಕೆ.ಎಚ್. ಪಾಟೀಲರು ಸೇರಿ ಅಸಂಖ್ಯ ಸ್ವಾತಂತ್ರ್ಯ ಸೇನಾನಿಗಳು ದೇಶಕ್ಕಾಗಿ ಸರ್ವತ್ಯಾಗ ಮಾಡಿದ್ದು ನೆನೆದರೆ ಹೃದಯದಲ್ಲಿ ಹೆಮ್ಮೆಯ ಪ್ರವಾಹ ಹರಿಯುವುದು.

ದೇಶಭಕ್ತ ಮೈಲಾರ ಮಹಾದೇವಪ್ಪ ಅವರ ನೇತೃತ್ವದಲ್ಲಿ ಕೋಗನೂರು, ಶಿಗ್ಲಿ, ಹೆಬ್ಬಾಳ, ನಾಗರಮಡುವು, ವರವಿ, ಹೊಸೂರ, ಅಂಕಲಿ, ಮೊದಲಾದ ಗ್ರಾಮಗಳ ಸ್ವಾತಂತ್ರ್ಯ ಹೋರಾಟಗಾರರು ಚಳವಳಿಯಲ್ಲಿ ಧುಮುಕಿ ಅಪಾರ ತ್ಯಾಗ ಮಾಡಿದ್ದಾರೆ ಎಂದು ಸ್ಮರಿಸಿದರು.

ಸಮಾರಂಭದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರು, ಸಾರ್ವಜನಿಕರು, ಅಪಾರ ಸಂಖ್ಯೆಯ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> ಸ್ವಾತಂತ್ರ್ಯ ಸಂಗ್ರಾಮದಲ್ಲಿ ಗದಗ ಜಿಲ್ಲೆಯ ಪಾತ್ರ ಅವಿಸ್ಮರಣೀಯವಾದುದು. ಅಂದು ಲೋಕಮಾನ್ಯ ಬಾಲಗಂಗಾಧರ ತಿಲಕ, ಪಂಡಿತ ಜವಾಹರಲಾಲ ನೆಹರು, ರಾಷ್ಟ್ರಪಿತ ಮಹಾತ್ಮ ಗಾಂಧೀಯವರನ್ನು ಬರಮಾಡಿಕೊಂಡ ಗದಗ, ರಚನಾತ್ಮಕ ಕೆಲಸಗಳ ಮೂಲಕ ಸ್ವಾತಂತ್ರ್ಯ ಹೋರಾಟಕ್ಕೆ ಬಲ ತುಂಬಿತ್ತು. ಚರಕ ಮನೆಮನೆಯ ಮಾತಾಗಿದ್ದಿತು. ಸ್ವದೇಶಿ ಆಂದೋಲನವನ್ನು ಉಸಿರಾಗಿಸಿಕೊಂಡ ನಮ್ಮ ಹಿರಿಯರು ಹತ್ತಾರು ಶೈಕ್ಷಣಿಕ ಸಂಸ್ಥೆಗಳನ್ನು ಕಟ್ಟಿದರು. ದೇಸೀ ಕ್ರೀಡೆಗೆ ಪ್ರೋತ್ಸಾಹ ನೀಡಿದರು. ಚಾರಿತ್ರ್ಯವಂತರಾಗಿ ದೇಶಕ್ಕಾಗಿ ಸಮರ್ಪಿತರಾದರು ಎಂದು ಎಚ್.ಕೆ. ಪಾಟೀಲ ಹೇಳಿದರು.



### ಡಯಾಲಿಸಿಸ್ ಚಿಕಿತ್ಸಾ ಕೇಂದ್ರ ಉದ್ಘಾಟಿಸಿದ ಶಾಸಕ ಜಿ.ಎಸ್. ಪಾಟೀಲ

## ವೈದ್ಯಾಧಿಕಾರಿಗಳು ಸಮಾಜದ ಆಸ್ತಿ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಮೂತ್ರಪಿಂಡ ಸಮಸ್ಯೆಯಿಂದ ಬಳಲುತ್ತಿರುವ ರೋಗಿಗಳಿಗೆ ಮೂತ್ರಪಿಂಡದ ಆರೈಕೆಯು ಸಮುದಾಯ ಕೇಂದ್ರದಲ್ಲಿ ಉಚಿತವಾಗಿ ಲಭ್ಯವಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಇಲ್ಲಿನ ಸರ್ಕಾರಿ ಆಸ್ಪತ್ರೆಯಲ್ಲಿ ನ್ಯಾಷನಲ್ ಹೆಲ್ತ್ ಮಿಷನ್ ಯೋಜನೆ ಅಡಿಯಲ್ಲಿ ಪಬ್ಲಿಕ್ ಪ್ರೈವೇಟ್ ಪಾರ್ಟಿಸಿಪೆಟ್, ಡಿಸಿಡಿಸಿ ಹೆಲ್ತ್ ಸರ್ವಿಸ್ ಪ್ರೈವೇಟ್ ಲಿಮಿಟೆಡ್ (ಕಿಡ್ನಿ ಕೇರ್) ಸಹಯೋಗದಲ್ಲಿ ಗುರುವಾರ ಡಯಾಲಿಸಿಸ್ ಚಿಕಿತ್ಸಾ ಕೇಂದ್ರ ಉದ್ಘಾಟಿಸಿ ಅವರು ಮಾತನಾಡಿದರು.

ತಾಲೂಕಿನಲ್ಲಿ ಮೂತ್ರಕೋಶದ ತೊಂದರೆಯಿಂದ ಬಳಲುತ್ತಿರುವ ಬಡ ರೋಗಿಗಳಿಗೆ ಈ ಕೇಂದ್ರವು ಅನುಕೂಲವಾಗಲಿದೆ. ಆಸ್ಪತ್ರೆಯ ಆರೋಗ್ಯ ಸುರಕ್ಷಾ ಸಮಿತಿ ಸದಸ್ಯರು ಸಹ ಮೂತ್ರಕೋಶದ ತೊಂದರೆಯಿಂದ ಬಳಲುತ್ತಿರುವ ರೋಗಿಗಳು ಚಿಕಿತ್ಸೆಗಾಗಿ ರೋಣ, ಗದಗ ಮತ್ತು ಕೊಪ್ಪಳಕ್ಕೆ ಹೋಗಬೇಕಾದ ಸಂದರ್ಭವಿತ್ತು. ರೋಗಿಗಳಿಗೆ ಆಗುತ್ತಿರುವ ತೊಂದರೆ ಕುರಿತು ಗಮನ ಸೆಳೆದಾಗ ಪಟ್ಟಣದಲ್ಲಿ ಡಯಾಲಿಸಿಸ್ ಕೇಂದ್ರ ಆರಂಭಿಸುವ ಭರವಸೆ ನೀಡಿದಂತೆ ಇಂದು ಡಯಾಲಿಸಿಸ್ ಚಿಕಿತ್ಸಾ ಕೇಂದ್ರವನ್ನು ಉದ್ಘಾಟಿಸಲಾಗಿದೆ ಎಂದರು.



ಪಟ್ಟಣದಲ್ಲಿ ಸಮುದಾಯ ಸರ್ಕಾರಿ ಆಸ್ಪತ್ರೆಯನ್ನು ತಾಲೂಕಾ ಮಟ್ಟದ ಆಸ್ಪತ್ರೆಯನ್ನಾಗಿ ಮಾರ್ಪಡಿಸಲು ಈಗಾಗಲೇ ಸರ್ಕಾರ ಮಟ್ಟದಲ್ಲಿ ಮಾತನಾಡಿದ್ದು, ಮುಂದಿನ ದಿನಗಳಲ್ಲಿ ಆ ಕಾರ್ಯವೂ ನೆರವೇರಲಿದೆ. ಆಸ್ಪತ್ರೆಯಲ್ಲಿರುವ ವೈದ್ಯರು ಮತ್ತು ತಾಂತ್ರಿಕ ಸಿಬ್ಬಂದಿಗಳ ಮೂಲಕ ಆಸ್ಪತ್ರೆಯಲ್ಲಿ ಹೆರಿಗೆ ಸಿಜರಿನ್ ಘಟಕ ಆರಂಭಿಸಲಾಗಿದೆ. ಸರ್ಕಾರಿ ಆಸ್ಪತ್ರೆ ಹಾಗೂ ಇಲ್ಲಿ ಸೇವೆ ಸಲ್ಲಿಸುವ ವೈದ್ಯಾಧಿಕಾರಿಗಳು ಸಮಾಜದ ಆಸ್ತಿಯಾಗಿದ್ದಾರೆ. ಆಸ್ಪತ್ರೆಯ ಸದ್ಬಳಕೆ ಮಾಡಿ, ವಿಶ್ವಾಸದಿಂದ ವೈದ್ಯರ ಸೇವೆಯನ್ನು ಪಡೆದಕೊಳ್ಳಬೇಕಿದೆ. ಹೀಗಾಗಿ ಸಾರ್ವಜನಿಕರ ಹಾಗೂ ವಿವಿಧ ಘಟಕಗಳ ಪದಾಧಿಕಾರಿಗಳ ಸಹಕಾರ ಬೇಕು ಎಂದರು.

ಆರೋಗ್ಯ ಸುರಕ್ಷಾ ಸಮಿತಿ ಸದಸ್ಯರಾದ ರಾಜು ಸಾಂಗ್ಲೀಕರ, ಶರಣಪ್ಪ ಚಳಗೇರಿ ಮಾತನಾಡಿ, ಕಿಡ್ನಿ ಸಮಸ್ಯೆಯಿಂದ ಬಳಲುವ ರೋಗಿಗಳು ವಾರದಲ್ಲಿ 2/3 ಬಾರಿ ಡಯಾಲಿಸಿಸ್‌ಗೆ ಒಳಗಾಗಬೇಕು. ರೋಗಿಗಳ ಕಷ್ಟವನ್ನು ಅರಿತ ಶಾಸಕ ಜಿ.ಎಸ್. ಪಾಟೀಲರು ಡಯಾಲಿಸಿಸ್ ಚಿಕಿತ್ಸಾ ಕೇಂದ್ರ ಆರಂಭಿಸಿ ಬಡರೋಗಿಗಳಿಗೆ ನೆರವಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಡಾ. ಅನಿಲಕುಮಾರ ತೋಟದ, ಮುರ್ತುಜಾ ಡಾಲಾಯತ, ಸಿದ್ದಪ್ಪ ಬಂಡಿ, ಅಶೋಕ ಬಾಗಮಾರ, ವೀರಣ್ಣ ಶೆಟ್ಟರ, ರಫೀಕ್ ತೋರಗಲ್, ಶ್ರೀಧರ ಬಿದರಳ್ಳಿ, ಬಸವರಾಜ ಹೂಗಾರ, ಯಲ್ಲಪ್ಪ ಬಂಕದ, ಉಮೇಶ ರಾಠೋಡ ಸೇರಿ ಇತರರು ಇದ್ದರು.

> ಜಿಲ್ಲೆಯ ಡಯಾಲಿಸಿಸ್ ಕೇಂದ್ರದ ಆಡಳಿತಾಧಿಕಾರಿ ಶಿದ್ಧಲಿಂಗೇಶ್ವರ ಶಿವಶಿಂಪಿಗೇರ ಮಾತನಾಡಿ, 2 ಬೆಡ್‌ಗಳ ಅತ್ಯಾಧುನಿಕ ಯಂತ್ರೋಪಕರಣಗಳ ಕೇಂದ್ರ ಇದಾಗಿದೆ. ಬೆಳಿಗ್ಗೆ 8ರಿಂದ ಸಂಜೆ 4ರವೆರೆಗೆ ಕಾರ್ಯನಿರ್ವಹಿಸುವ ಕೇಂದ್ರದಲ್ಲಿ ಓರ್ವ ರೋಗಿಯ ಡಯಾಲಿಸಿಸ್ ಮಾಡಲು ಕನಿಷ್ಠ 4 ತಾಸುಗಳ ಸಮಯಾವಕಾಶ ಬೇಕಾಗಿದ್ದರಿಂದ ದಿನಕ್ಕೆ 4 ರೋಗಿಗಳ ಡಯಾಲಿಸಿಸ್ ಮಾಡಲಾಗುವುದು ಎಂದರು.

## ದೇಶಕ್ಕಾಗಿ ರೋಣದ ಕೊಡುಗೆ ಅನನ್ಯ



**■ವಿಜಯಸಾಕ್ಷಿ ಸುದ್ದಿ, ರೋಣ**

ದೇಶದ ಸ್ವಾತಂತ್ರ್ಯಕ್ಕಾಗಿ ರೋಣ ತಾಲೂಕಿನ ಕೊಡುಗೆ ಅನನ್ಯವಾಗಿದೆ ಎಂಬ ಇತಿಹಾಸವನ್ನು ಯಾರು ಕೂಡ ಮರೆಯಬಾರದು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಗುರುವಾರ ಇಲ್ಲಿನ ತಾಲೂಕಾ ಕ್ರೀಡಾಂಗಣದಲ್ಲಿ ಜರುಗಿದ 78ನೇ ಸ್ವಾತಂತ್ರ್ಯೋತ್ಸವ ಧ್ವಜಾರೋಹಣ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಅನೇಕ ಗ್ರಾಮಗಳ ಮಹನೀಯರು ದೇಶದ ಹಿತಕ್ಕಾಗಿ ಮತ್ತು ಸ್ವಾತ್ರಂತ್ರ್ಯಕ್ಕಾಗಿ ತ್ಯಾಗ – ಬಲಿದಾನಗಳನ್ನು ನೀಡಿದ್ದಾರೆ.

ಈ ಎರಡು ತಾಲೂಕಿನಲ್ಲಿ ಅಡಕವಾಗಿದ್ದ ದೇಶ ಪ್ರೇಮವನ್ನು ಕಂಡ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ಜಕ್ಕಲಿ ಗ್ರಾಮಕ್ಕೆ ಭೇಟಿ ನೀಡಿದ್ದು ಇತಿಹಾಸವಾಗಿದೆ. ದಿ. ಅಂದಾನಪ್ಪ ದೊಡ್ಡಮೇಟಿಯವರ ದೇಶಪ್ರೇಮ ನಮಗೆ ಮಾದರಿಯಾಗಿದೆ ಎಂದರು.

ರೋಣ ಮತಕ್ಷೇತ್ರದ ಸಮಗ್ರ ಅಭಿವೃದ್ಧಿಯನ್ನು ದೃಷ್ಟಿಯಲ್ಲಿಟ್ಟುಕೊಂಡು ಕ್ರಿಯಾಯೋಜನೆಗಳನ್ನು ರೂಪಿಸಲಾಗಿದೆ. ವಿಶೇಷವಾಗಿ ರೋಣ ನಗರವನ್ನು ಸುಂದರ ಪಟ್ಟಣವನ್ನಾಗಿ ರೂಪಿಸಲು ಈಗಾಗಲೇ 20 ಕೋಟಿ ಅನುದಾನವನ್ನು ಮಿಸಲಿಡಲಾಗಿದ್ದು, ಮಳೆ ಬಿಡುವು ನೀಡುತ್ತಿದ್ದಂತೆ ರಸ್ತೆ ಅಗಲೀಕರಣ ಕೆಲಸವನ್ನು ಆರಂಭಿಸಲಾಗುವುದು ಎಂದ ಅವರು, 2 ಕೋಟಿ ರೂಗಳ ವೆಚ್ಚದಲ್ಲಿ ಕೃಷಿ ಇಲಾಖೆಯ ಕಟ್ಟಡ ನಿರ್ಮಾಣ ಕಾಮಗಾರಿಗೂ ಚಾಲನೆ ನೀಡಲಾಗುವುದು ಎಂದರು.

ತಹಸೀಲ್ದಾರ ನಾಗರಾಜ ಕೆ ಧ್ವಜಾರೋಹಣವನ್ನು ನೆರವೇರಿಸಿದರು.

ಪುರಸಭೆಯ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು, ಮುಖಂಡರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ
–ಸುಭಾಷಿತ

## ಸಂಪಾದಕೀಯ

### ಸ್ವಾತಂತ್ರ್ಯ ಸಿಕ್ಕು 78 ವರ್ಷವಾದರೂ ಮಹಿಳಾ ಸುರಕ್ಷತೆಯ ಸವಾಲು

ಸ್ವಾತಂತ್ರ್ಯ ಸಿಕ್ಕು 78 ವರ್ಷವಾದರೂ ಮಹಿಳಾ ಸುರಕ್ಷತೆಯ ಸವಾಲು

ದೇಶಾದ್ಯಂತ 78ನೇ ಸ್ವಾತಂತ್ರ್ಯೋತ್ಸವವನ್ನು ಸಡಗರ ಸಂಭ್ರಮದಿಂದ ಮತ್ತು ದೇಶದ ಸ್ವಾತಂತ್ರ್ಯಕ್ಕೆ ತ್ಯಾಗ ಬಲಿದಾನ ಮಾಡಿದ ಮಹನೀಯರನ್ನು ಸ್ಮರಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

ನೂರಾರು ವರ್ಷಗಳಿಂದ ಬ್ರಿಟಿಷರ ದುರಾಡಳಿತಕ್ಕೆ ಸಾಕ್ಷಿಯಾಗಿದ್ದ ಭಾರತ ಇಂದು ಸ್ವತಂತ್ರಗೊಂಡು 78 ವಸಂತಗಳನ್ನ ಪೂರೈಸಿದೆ. ಈ ಸುಸಂದರ್ಭವನ್ನ ರಾಷ್ಟ್ರೀಯ ಹಬ್ಬವನ್ನಾಗಿ ಆಚರಿಸಿ, ದೇಶದ ಸ್ವಾತಂತ್ರ್ಯ, ಐಕ್ಯತೆಗೆ ಪ್ರಾಣಾರ್ಪಣೆ ಮಾಡಿದ ಎಲ್ಲರಿಗೂ ಗೌರವವನ್ನು ಸಮರ್ಪಿಸುವ ದಿನ.

ಸ್ವಾತಂತ್ರ್ಯ ಹೋರಾಟದಲ್ಲಿ ಮಹಾತ್ಮ ಗಾಂಧೀಜಿ ಪಾತ್ರ ಅತ್ಯಂತ ಪ್ರಮುಖವಾಗಿದೆ. ಅಹಿಂಸೆ ಮೂಲಕವೇ ಭಾರತಕ್ಕೆ ಸ್ವತಂತ್ರ ತಂದುಕೊಡುವಲ್ಲಿ ಮಹಾತ್ಮ ಗಾಂಧೀಜಿ ಬಹುವಾಗಿ ಶ್ರಮಿಸಿದ್ದಾರೆ. ಸ್ವಾತಂತ್ರ್ಯ ನಂತರವೂ ಭವಿಷ್ಯದ ಭಾರತಕ್ಕೆ ತಮ್ಮದೇ ಆದ ಆಶಯಗಳನ್ನು ವ್ಯಕ್ತಪಡಿಸಿದ್ದಾರೆ.

ಮಹಾತ್ಮ ಗಾಂಧೀಜಿ ಅವರ ರಾಮ ರಾಜ್ಯದಲ್ಲಿ ಮಹಿಳಾ ಸಬಲೀಕರಣವು ಒಂದು. ಆದರೆ ಕಳೆದ 78 ವರ್ಷಗಳಲ್ಲಿ ಭಾರತದಲ್ಲಿ ಮಹಿಳಾ ಸಬಲೀಕರಣ ಎನ್ನುವುದು ಕೇವಲ ರಾಜಕೀಯ ಚರ್ಚಿತ ವಿಷಯವಾಗಿದೆ.

78ನೇ ಸ್ವಾತಂತ್ರ್ಯೋತ್ಸವ ಸಮಾರಂಭದಲ್ಲೂ ಪ್ರಧಾನಿ ನರೇಂದ್ರ ಮೋದಿ ಮಹಿಳಾ ಸಬಲೀಕರಣದ ವಿಷಯವನ್ನ ಪ್ರಸ್ತಾಪಿಸಿರುವುದು ಒಳ್ಳೆಯದೇ. ಆದರೆ ಕಳೆದ 78 ವರ್ಷಗಳಲ್ಲಿ ಆ ನಿಟ್ಟಿನಲ್ಲಿ ಭಾರತ ಪ್ರಗತಿ ಸಾಧಿಸಿಲ್ಲ ಎನ್ನುವುದು ಕೂಡ ಕಳವಳಕಾರಿ ಸಂಗತಿ.

ವಿಕಸಿತ ಭಾರತ ನಿರ್ಮಾಣಕ್ಕೆ ಮಹಿಳಾ ಸಬಲೀಕರಣ ಅತ್ಯಂತ ಅವಶ್ಯಕವಾಗಿದೆ. ಮುಂದಿನ ಸ್ವಾತಂತ್ರ್ಯೋತ್ಸವ ಸಮಾರಂಭಕ್ಕೂ ಮುನ್ನವೇ ಆ ನಿಟ್ಟಿನಲ್ಲಿ ಸರ್ಕಾರ ಮತ್ತು ದೇಶದ ಜನ ಮುಂದಡಿ ಇಡುವಂತಾಗಲಿ.

## 78ನೇ ಸ್ವಾತಂತ್ರ್ಯೋತ್ಸವ ದಿನ ಆಚರಣೆ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಸಿದ್ಧಾರ್ಥ ಶಿಕ್ಷಣ ಹಾಗೂ ಗ್ರಾಮೀಣ ಅಭಿವೃದ್ಧಿ ವಿವಿಧೋದ್ದೇಶಗಳ ಸಂಘ ಬೆಟಗೇರಿ ವತಿಯಿಂದ 78ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಆಚರಿಸಲಾಯಿತು.

ಸಂಘದ ಗೌರವ ಅಧ್ಯಕ್ಷ ಸತೀಶ ಎಚ್.ಹೂಲಿ ಧ್ವಜಾರೋಹಣ ನೆರವೇರಿಸಿದರು.

ಸಂಘದ ಅಧ್ಯಕ್ಷ ಗುರು ಚಲವಾದಿ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ನಮಗೆ ಬಹಳಷ್ಟು ಕೊಡುಗೆಗಳನ್ನು ಕೊಟ್ಟಿದ್ದಾರೆ.

ಅವುಗಳನ್ನು ಸರಿಯಾದ ರೀತಿಯಲ್ಲಿ ಬಳಸಿಕೊಳ್ಳಬೇಕು ಎಂದು ಹೇಳಿದರು.

ಸಂಘದ ಪದಾಧಿಕಾರಿಗಳಾದ ಮಂಜುನಾಥ ಚಲವಾದಿ, ಆನಂದ ಚಲವಾದಿ, ನೀರಜಾ ಹೂಲಿ, ಗೌತಮ ಚಲವಾದಿ, ಸಿದ್ಧು ಚಿಕ್ಕಣ್ಣವರ, ಗಿರೀಶ ಜಂಕಲಿ, ಸಿದ್ಧಾರ್ಥ ಚಲವಾದಿ ಇನ್ನೂ ಮುಂತಾದವರು ಭಾಗವಹಿಸಿದ್ದರು.

## ಗ್ಯಾರಂಟಿಗಳಿಂದ ರಾಜ್ಯ ದಿವಾಳಿ ಎಂದವರಿಗೆ ಆರ್ಥಿಕ ಬೆಳವಣಿಗೆಯಿಂದಲೇ ಉತ್ತರ: ಸಿಎಂ




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು,

ನಾಡಿನ ಜನತೆ ನೀಡಿದ ತೀರ್ಪನ್ನು ಗೌರವಿಸಿ, ಸಂವಿಧಾನದ ಆಶಯಗಳ ಪ್ರಕಾರ ಪ್ರತಿಪಕ್ಷಗಳು ಜವಾಬ್ದಾರಿಯುತವಾಗಿ ನಡೆಯಬೇಕು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ನಗರದ ಮಾಣೆಕ್ ಶಾ ಪರೇಡ್ ಮೈದಾನದಲ್ಲಿ ನಡೆದ 78ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ, ರಾಜ್ಯದ ಜನತೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ದೇಶದ ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಮತ್ತು ರಾಜ್ಯಗಳ ಸಂಬಂಧವನ್ನು ಸಂವಿಧಾನ ಸ್ಪಷ್ಟಪಡಿಸಿದೆ. ಜನಕಲ್ಯಾಣ ಕಾರ್ಯಗಳನ್ನು ಅನುಷ್ಠಾನಗೊಳಿಸುವುದು ರಾಜ್ಯಗಳ ಜವಾಬ್ದಾರಿಯಾಗಿದೆ. ಅವುಗಳಿಗೆ ಪೂರಕವಾಗಿ ಸಂಪನ್ಮೂಲ ಒದಗಿಸುವುದು ಕೇಂದ್ರದ ಹೊಣೆಗಾರಿಕೆ ಎಂದು ತಿಳಿಸಿದರು.

ಇತ್ತೀಚಿನ ವರ್ಷಗಳಲ್ಲಿ ಕೇಂದ್ರ ಸರ್ಕಾರ ಈ ಆಶಯದಿಂದ ದೂರ ಸರಿಯುತ್ತಿರುವ ಹಿನ್ನೆಲೆಯಲ್ಲಿ ರಾಜ್ಯಗಳಿಗೆ ಅನುದಾನ ಹಂಚಿಕೆಯಲ್ಲಿ ತಾರತಮ್ಯವಾಗುತ್ತಿದೆ. ಸಂವಿಧಾನದ ಆಶಯಗಳನ್ನು ನಿರ್ಲಕ್ಷಿಸಿ, ರಾಜ್ಯಗಳಿಗೆ ದೊರೆಯಬೇಕಾದ ಹಣಕಾಸಿನ ಪಾಲನ್ನು ನೀಡಲು ಮೀನಾಮೇಷ ಎಣಿಸಲಾಗುತ್ತಿದೆ. ಕೇಂದ್ರದಿಂದ ನ್ಯಾಯಯುತವಾಗಿ ಬರಬೇಕಾದ ಪರಿಹಾರದ ಮೊತ್ತ ಪಡೆಯಲು ನ್ಯಾಯಾಲಯದ ಮೊರೆ ಹೋಗುವ ಅನಿವಾರ್ಯತೆ ಎದುರಾಗಿರುವುದು ಜನಹಿತಕ್ಕೆ ಒಳ್ಳೆಯದಲ್ಲ. ಮುಂದಿನ ದಿನಗಳಲ್ಲಾದರೂ ಕೇಂದ್ರ ಸರ್ಕಾರ, ರಾಜ್ಯಗಳು ಅಭಿವೃದ್ಧಿಯಾದರೆ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ ಎಂಬುದನ್ನು ಮನಗಂಡು ರಾಜ್ಯಗಳ ಅಭಿವೃದ್ಧಿಗೆ ಅನುದಾನಗಳನ್ನು ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು.

ಜನತೆಯ ತೀರ್ಪನ್ನು ಧಿಕ್ಕರಿಸಿ ನಡೆಸುವ ಹಿಂಬಾಗಿಲ ರಾಜಕಾರಣವನ್ನು ಇತಿಹಾಸದಲ್ಲಿ ಜನತೆ ಎಂದಿಗೂ ಕ್ಷಮಿಸಿಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಡಿ ನಾಡಿನ ಮಹಾ ಜನತೆ ನೀಡಿದ ತೀರ್ಪನ್ನು ಗೌರವಿಸಿ, ಸಂವಿಧಾನದ ಆಶಯಗಳ ಪ್ರಕಾರ ವಿರೋಧಪಕ್ಷಗಳು ಜವಾಬ್ದಾರಿಯುತವಾಗಿ ನಡೆಯಬೇಕೆಂಬುದನ್ನು ಎಲ್ಲರೂ ನಿರೀಕ್ಷಿಸುತ್ತಾರೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ತಮ್ಮ ರಾಜಕೀಯ ಪ್ರಬುದ್ಧತೆ ಮೆರೆದಿರುವ ಮತದಾರರು, ಪ್ರಜಾಪ್ರಭುತ್ವ ಯಾರ ಕೈಗೊಂಬೆಯಾಗಲು ಸಾಧ್ಯವಿಲ್ಲ ಎಂಬ ಸಂದೇಶ ನೀಡಿದ್ದಾರೆ.

### ಡಂಬಳ ಹೋಬಳಿಯ ಹಲವೆಡೆ ಸಂಭ್ರಮದ ಸ್ವಾತಂತ್ರ್ಯೋತ್ಸವ ಆಚರಣೆ

# ಬ್ರಿಟಿಷರ ದಾಸ್ಯದಿಂದ ಮುಕ್ತಿಗೊಂಡ ದಿನ

■ವಿಜಯಸಾಕ್ಷಿ ಸುದ್ದಿ, ಡಂಬಳ

ಹೋಬಳಿಯ 24 ಗ್ರಾಮಗಳ ಶಾಲೆ, ಕಾಲೇಜು, ಗ್ರಾಮ ಪಂಚಾಯಿತಿ, ಸರ್ಕಾರಿ ಕಂದಾಯ ಇಲಾಖೆ, ಸಣ್ಣ ನೀರಾವರಿ, ಹೆಸ್ಕಾಂ ಇಲಾಖೆಗಳ ಆವರಣದಲ್ಲಿ 78ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಡಗರದಿಂದ ಆಚರಿಸಲಾಯಿತು.

ಡಂಬಳ ಗ್ರಾ.ಪಂ: ಸ್ವಾತಂತ್ರೋತ್ಸವ ಎಂಬುದು ನಮ್ಮ ಹೆಮ್ಮೆ. ಈ ಶುಭ ಸಂದರ್ಭದಲ್ಲಿ ಎಲ್ಲ ಸ್ವಾತಂತ್ರ್ಯ ಸೇನಾನಿಗಳ ಸ್ಮರಣೆ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ಗ್ರಾ.ಪಂ ಅಧ್ಯಕ್ಷೆ ಶಿವಲೀಲಾ ಬಂಡಿಹಾಳ ಹೇಳಿದರು.

ಡಂಬಳ ಗ್ರಾ.ಪಂ ಆವರಣದಲ್ಲಿ ಧ್ವಜಾ-ರೋಣ ನೆರವೇರಿ ಅವರು ಮಾತನಾಡಿದರು. ಅದೆಷ್ಟೋ ಮಹನೀಯರ ತ್ಯಾಗ-ಬಲಿದಾನ, ಹೋರಾಟದ ಫಲವಾಗಿ ಲಭಿಸಿದೆ. ನಾವೆಲ್ಲರೂ ದಾಸ್ಯದಿಂದ ಬಿಡುಗಡೆ-ಯಾದ ದಿನ ಇದಾಗಿದೆ ಎಂದು ಹೇಳಿದರು. ಮಕ್ಕಳಿಗೆ ಶಾಲಾ ಕಲಿಕಾ ಸಾಮಗ್ರಿಗಳ ವಿತರಣೆಗೆ ಅಧ್ಯಕ್ಷರು, ಉಪಾಧ್ಯಕ್ಷರು ಸದಸ್ಯರು ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಪಿಡಿಒ ಶಶಿದರ ಹೊಂಬಳ, ಉಪಾಧ್ಯಕ್ಷೆ ಲಕ್ಷ್ಮೀ ಕಾಶಭೋವಿ,



ಗ್ರಾ.ಪಂ ಸದಸ್ಯರು, ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು, ಅಂಗನವಾಡಿ ಶಿಕ್ಷಕಿಯರು, ಸಹಾಯಕಿಯರು, ಆಶಾ ಕಾರ್ಯಕರ್ತೆಯರು, ಎಲ್ಲಾ ಶಾಲಾ ಮುಖ್ಯೋಪಾಧ್ಯಾಯರು, ಗುರುವೃಂದ, ವಿದ್ಯಾರ್ಥಿಗಳು, ಗ್ರಾ.ಪಂ ಸಿಬ್ಬಂದಿ ವರ್ಗ, ಕಾರ್ಯಕ್ರಮವನ್ನು ರಮೇಶ ಕೊರ್ಲಹಳ್ಳಿ ನಿರೂಪಿಸಿದರು.

ರೈತ ಸಂಪರ್ಕ ಕೇಂದ್ರ: ಇಲ್ಲಿನ ರೈತ ಸಂಪರ್ಕ ಕೇಂದ್ರದಲ್ಲಿ ಕೃಷಿ ಅಧಿಕಾರಿ ಎಸ್.ಬಿ. ರಾಮೇನಳ್ಳಿ ಧ್ವಜಾರೋಹಣ ನೆರವೇರಿಸಿದರು. ಸಿಬ್ಬಂದಿಗಳಾದ ಎಸ್. ಎಸ್. ಮೂಡಲಗಿ, ನಿಂಗಪ್ಪ ಹೊಸಳ್ಳಿ, ಡಿ.ಡಿ. ಸೊರಟೂರ, ಗಿರಿಯಪ್ಪ, ನಾಗರಾಜ, ಮಾರುತಿ ರಾಠೋಡ, ರೈತರು ಇದ್ದರು.

ಪೊಲೀಸ್ ಠಾಣೆಯಲ್ಲಿ: ಇಲ್ಲಿನ ಪೊಲೀಸ್ ಹೊರಠಾಣೆಯ ಎಎಸ್‌ಐ ವೀರಣ್ಣ ತಂತ್ರಿ ಧ್ವಜಾರೋಹಣ ನೆರವೇರಿಸಿದರು. ಬಸುರಾಜ ಬಣಕಾರ, ರಹಮಾನಸಾಬ ನಧಾಪ, ವಿದ್ಯಾರ್ಥಿಗಳು ಇದ್ದರು.

ಉಪತಹಸೀಲ್ದಾರ ಕಚೇರಿಯಲ್ಲಿ

ಇಲ್ಲಿನ ಕಂದಾಯ ಇಲಾಖೆಯ ಉಪತಹಸೀಲ್ದಾರ ಕಚೇರಿಯ ಆವರಣದಲ್ಲಿ ಉಪತಹಸೀಲ್ದಾರ ಚಿದಾನಂದ ಬೂಳವಟಗಿ ಧ್ವಜಾರೋಹಣ ನೆರವೇರಿಸಿದರು. ಕಂದಾಯ ನಿರೀಕ್ಷಕ ಪ್ರಭು ಭಾಗಲಿ, ಎಮ್.ಎಮ್. ವಿಭೂತಿ, ಹನಮಂತಪ್ಪ ತಳವಾರ, ಸುರೇಶ, ಧರ್ಮಣ್ಣ ಮತ್ತು ಗ್ರಾಮದ ಮುರ್ತುಜಾ ಮನಿಯಾರ ಸೇರಿದಂತೆ ಇತರರು ಇದ್ದರು.

ಮಾಜಿ ಸೈನಿಕರು: ಡಂಬಳ ಗ್ರಾಮದ ಅಶೋಕ ಸ್ಥಂಬದ ಆವರಣದಲ್ಲಿ ಬುಧವಾರ ರಾತ್ರಿ 12 ಗಂಟೆಗೆ ಮಾಜಿ ಸೈನಿಕರ ಸಂಘದ ಅಧ್ಯಕ್ಷ ವಾಸಪ್ಪ ಕಾಶಭೋವಿ ಧ್ವಜಾರೋಹಣ ನೆರವೇರಿಸಿದರು. ಗ್ರಾಮದ ಮಾಜಿ ಸೈನಿಕರು ಸೇರಿದಂತೆ ಇತರರು ಇದ್ದರ.



## ಗಂಗಿಮಡಿಯಲ್ಲಿ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಂಗಿಮಡಿಯ ಆಶ್ರಯ ಕಾಲೋನಿಯಲ್ಲಿ ಎಂ.ಜಿ. ಚಾರಿಟೇಬಲ್ ಹಾಗೂ ಅಬುಹುರೇರಾ ಮಸ್ಜಿದ್ ಸಹಯೋಗದಲ್ಲಿ ಗುರುವಾರ 78ನೇ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮವು ಅಬುಹುರೇರಾ ಮಸ್ಜಿದ್ ಕಮಿಟಿಯ ಉಪಾಧ್ಯಕ್ಷ ಚಾಂದಸಾಬ ಅಬ್ಬಿಗೇರಿ ಹಾಗೂ ಮೌಲಾನಾ ಮಹಮ್ಮದ್ ಅಲಿಯವರು ನೆರವೇರಿಸಿದರು.



ಈ ಸಂದರ್ಭದಲ್ಲಿ ಅಬುಹುರೇರಾ ಮಸ್ಜಿದ್ ಕಮಿಟಿಯ ಕಾರ್ಯದರ್ಶಿ ಮಹಮ್ಮದ ಸಾಬ ಬೋದ್ಲೇಖಾನ್. ಎಂ.ಜಿ. ಚಾರಿಟೇಬಲ್ ಕಾರ್ಯದರ್ಶಿ ಮೌಲಾನಾ ಅಬ್ದುಲ್ ಗಫುರ್ ಪಲ್ಲೇದ, ಹಿರಿಯರಾದ ಅಹಮ್ಮದ ಕಲೆಗಾರ, ಬಾಬಾಜಾನ್ ಕೊಡತಗೇರಿ, ಅಹಮ್ಮದ್, ಗುಜಮಾಗಡಿ, ಶಿರಹಟ್ಟಿ, ಹಾಫಿಜ್ ಮೈನುದ್ದಿನ ಸಿಕಂದರ ಮುಸ್ತಫಾ, ರೋಣ, ಸಯ್ಯದ್ ಇಟಗಿ, ಅಕ್ಬರ್ ಬೋದ್ಲೇಖಾನ, ನೂರ ಅಹಮ್ಮದ್ ಮುಂತಾದವರು ಉಪಸ್ಥಿತರಿದ್ದರು.

## ನಗರಸಭೆ ಸಹಕಾರಿ ಪತ್ತಿನ ಸೊಸೈಟಿಯಲ್ಲಿ ಸ್ವಾತಂತ್ರ್ಯೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ಸಹಕಾರಿ ಪತ್ತಿನ ಸೊಸೈಟಿಯಲ್ಲಿ 78ನೇ ಸ್ವಾತಂತ್ರ್ಯೋತ್ಸವದ ನಿಮಿತ್ತ ಸಂಘದ ಅಧ್ಯಕ್ಷರಾದ ಚಂದ್ರಶೇಖರ್ ಆರ್. ಹಾದಿಮನಿ ಧ್ವಜಾರೋಹಣ ನೆರವೇರಿಸಿದರು.



ಈ ಸಂದರ್ಭದಲ್ಲಿ ಜಿಲ್ಲಾ ಸಮಾಜ ಕಲ್ಯಾಣ ಉಪನಿರ್ದೇಶಕರು ಹಾಗೂ ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಮೇಶ್ ಪೋತದಾರ, ಕಾರ್ಯಪಾಲಕ ಅಭಿಯಂತರರು ಹಾಗೂ ಕಚೇರಿಯ ವ್ಯವಸ್ಥಾಪಕರು ಮತ್ತು ಕಂದಾಯ ವಿಭಾಗಿ ಅಧಿಕಾರಿಗಳು, ಪರಿಸರ ಅಭಿಯಂತರರು ಹಾಗೂ ಸ್ಯಾನಿಟರಿ ಇನ್ಸ್‌ಪೆಕ್ಟರ್, ನಾಮನಿರ್ದೇಶನ ಸದಸ್ಯರಾದ ದುರ್ಗೇಶ್ ವಿಭೂತಿ, ಹಿರಿಯರಾದ ವಿರುಪಾಕ್ಷಪ್ಪ ರಾಮಗಿರಿ, ಸಂಘದ ನಿರ್ದೇಶಕರಾದ ಹೇಮೇಶ್ ಯಟ್ಟಿ, ಕೆಂಚಪ್ಪ ಪೂಜಾರ್, ಜಯಪ್ಪ ದೊಡ್ಡಮನಿ, ಸಂಗಪ್ಪ ವಡ್ಡಿನ, ಸಣ್ಣಪ್ಪ ಬೋಳಮನವರ್, ವಾಸು ಹಾದಿಮನಿ, ನಾಗೇಶ್ ಬಳ್ಳಾರಿ, ವಿಜಯಲಕ್ಷ್ಮೀ ರಾಮಗಿರಿ, ಬಸವ್ವ ಬೇವಿನಮರದ, ಸಂಘದ ಕಾರ್ಯದರ್ಶಿ ಮರಿಯಪ್ಪ ಕೊಟ್ನೆಕಲ್, ಶಾಲಾ ವಿದ್ಯಾರ್ಥಿಗಳು, ಪೌರಕಾರ್ಮಿಕರು ಉಪಸ್ಥಿತರಿದ್ದರು.

## ಸ್ವಾತಂತ್ರ್ಯ ಎಂದಿಗೂ ಸ್ವೇಚ್ಛಾರವಾಗಬಾರದು

■ವಿಜಯಸಾಕ್ಷಿ ಸುದ್ದಿ, ನರೇಗಲ್

ನಮ್ಮ ಹಿಂದಿನ ಅನೇಕ ಹಿರಿಯರ ತ್ಯಾಗ-ಬಲಿದಾನದಿಂದ ಗಳಿಸಿಕೊಟ್ಟ ಸ್ವಾತಂತ್ರ್ಯನ್ನು ನಾವು ಕಾಪಾಡಿಕೊಳ್ಳಬೇಕಿದೆ. ಸ್ವಾತಂತ್ರ್ಯ ಎಂದಿಗೂ ಸ್ವೇಚ್ಛಾರವಾಗಬಾರದು ಎಂದು ನಿವೃತ್ತ ಶಿಕ್ಷಕ ಎಂ.ಎ. ಹಿರೆವಡೆಯರ ಹೇಳಿದರು.

ಪಟ್ಟಣದ ಬಸ್ ನಿಲ್ದಾಣದ ಬಳಿಯಿರುವ ಕೋಡಿಕೊಪ್ಪದ ಶ್ರೀ ಹುಚ್ಚೀರಪ್ಪಜ್ಜನವರ ಟ್ರಸ್ಟ್ ಕಮಿಟಿಯಲ್ಲಿ ಧ್ವಜಾರೋಹಣವನ್ನು ನೆರವೇರಿಸಿ ಅವರು ಮಾತನಾಡಿದರು.



ಸಾಹಿತಿ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಮಾತನಾಡಿ, ನಮಗೆ ದೊರಕಿರುವ ಸ್ವಾತಂತ್ರ್ಯ ಅದೆಷ್ಟು ಕಷ್ಟದಿಂದ ದೊರಕಿತು ಎಂಬುದನ್ನು ಇಂದಿನ ಯುವಕರು ತಿಳಿದುಕೊಳ್ಳಬೇಕು. ತಮ್ಮಲ್ಲಿನ ದುಶ್ಚಟಗಳನ್ನು ಬಿಟ್ಟು ದೇಶದ ಅಭಿವೃದ್ಧಿಗಾಗಿ ಪಣತೊಡಬೇಕು. ತಮ್ಮ ಶಕ್ತಿಯನ್ನು ರಚನಾತ್ಮಕ ಕಾರ್ಯಗಳಲ್ಲಿ ತೊಡಗಿಸಿಕೊಂಡು ಸಮಾಜದ ಉದ್ಧಾರಕ್ಕೂ ಮುಂದಾಗಬೇಕೆಂದು ಹೇಳಿದರು.

ಡಾ. ಎಂ.ಸಿ. ಚಪ್ಪನಮಠ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ನಿವೃತ್ತ ಗ್ರಂಥ ಪಾಲಕ ಕೆ.ಸಿ. ಜೋಗಿ, ಶಿವಬಸಪ್ಪ, ಮಲ್ಲನಗೌಡ ಪೊಲೀಸ್ ಪಾಟೀಲ, ರಾಜು ಹಲಗೇರಿ ಇನ್ನೂ ಮುಂತಾದವರಿದ್ದರು. ಮುತ್ತು ಹಡಪದ ನಿರೂಪಿಸಿದರು. ನಿವೃತ್ತ ಅಕ್ಷರ ದಾಸೋಹ ಅಧಿಕಾರಿ ಸಂಗನಾಳ ಸ್ವಾಗತಿಸಿ, ವಂದಿಸಿದರು.

### ಡಾ. ಕೆ.ಬಿ. ಧನ್ನೂರ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಧ್ವಜಾರೋಹಣ

## ಯೋಧರು ನಮ್ಮ ದೇಶದ ಸಂಪತ್ತು



■ವಿಜಯಸಾಕ್ಷಿ ಸುದ್ದಿ, ನರೇಗಲ್

ಮಳೆ, ಗಾಳಿ, ಛಳಿ ಎನ್ನದೆ ದಿನದ 24 ಗಂಟೆ ನಮ್ಮ ದೇಶದ ಗಡಿಯನ್ನು ಕಾಯುತ್ತಿರುವ ಯೋಧರು ನಿಜವಾಗಿಯೂ ನಮ್ಮ ದೇಶದ ಸಂಪತ್ತು. ತಮ್ಮ ವೈಯಕ್ತಿಕ ಬದುಕನ್ನು ಬದಿಗಿಟ್ಟು ನಮ್ಮೆಲ್ಲರನ್ನೂ ಕಾಯುತ್ತಿರುವ ದೇಶದ ಯೋಧರಿಗೆ ಇಂದು ನಾವು ಗೌರವವನ್ನು ಸಮರ್ಪಿಸಬೇಕೆಂದು ಪಟ್ಟಣದ ಪಿ.ಎಸ್.ಎಸ್. ಶಾಲೆಯ ಸಂಸ್ಥಾಪಕ ಅಧ್ಯಕ್ಷ ಡಾ. ಕೆ.ಬಿ. ಧನ್ನೂರ ಹೇಳಿದರು.

ಪಟ್ಟಣದ ಡಾ. ಕೆ.ಬಿ. ಧನ್ನೂರ ಆಂಗ್ಲ ಮಾಧ್ಯಮ ಶಾಲೆಯಲ್ಲಿ ನಡೆದ 78ನೇ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ನಮ್ಮ ದೇಶದ ಸ್ವಾತಂತ್ರ್ಯಕ್ಕಾಗಿ ಮಹಾತ್ಮಾ ಗಾಂಧಿ, ಜವಾಹರಲಾಲ ನೆಹರೂ, ವಲ್ಲಭ್‌ಭಾಯಿ ಪಟೇಲ, ಸರೋಜಿನಿ ನಾಯ್ಡು, ಬಾಲಗಂಗಾಧರ ತಿಲಕ ಹೀಗೆ ಅನೇಕ ಮಹನೀಯರು ಶ್ರಮಿಸಿದ್ದಾರೆ. ಅವರೆಲ್ಲರ ಹೋರಾಟದಿಂದ ದೊರೆತ ಈ ಸ್ವಾತಂತ್ರ್ಯವನ್ನು ನಾವು ಕಾಪಾಡಿಕೊಂಡು ಹೋಗಬೇಕಿದೆ. ಇಂದಿನ ದಿನಗಳಲ್ಲಿ ಪ್ರಜಾಭುತ್ವದ ಅಂಗಗಳೂ ಸಹ ಸರಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲ ಎಂಬುದು ವಿಷಾದನೀಯ ಸಂಗತಿಯಾಗಿದೆ. ಇದ್ದುದರಲ್ಲಿಯೇ ನ್ಯಾಯಾಂಗವು ತನ್ನ ಸಮರ್ಪಕ ಕಾರ್ಯದ ಮೂಲಕ ನಮ್ಮಲ್ಲಿ ಭರವಸೆಯುನ್ನು ಮೂಡಿಸುತ್ತಿದೆ. ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳಾದ ನೀವುಗಳೂ ಸಹ ಉತ್ತಮ ನಾಗರಿಕರಾಗಿ ಈ ದೇಶದ ಸೇವೆಗ ನಿಮ್ಮನ್ನು ನೀವು ಅರ್ಪಿಸಿಕೊಳ್ಳಿ ಎಂದು ಹೇಳಿದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಮಾತನಾಡಿ, ಇಂದಿನ ಯುವಕರು ನಾಳಿನ ನಾಗರಿಕರು. ಈ ಮಾತನ್ನು ನೀವೆಲ್ಲ ಮನಸ್ಸಿನಲ್ಲಿಟ್ಟುಕೊಂಡು ಮುನ್ನಡೆಯಬೇಕು ಎಂದರು.ಸನ್ಮಾನ ಸ್ವೀಕರಿಸಿದ ಮಾಜಿ ಯೋಧ ಶಿವಪುತ್ರಪ್ಪ ಸಂಗನಾಳ, ನಿವೃತ್ತ ಶಿಕ್ಷಕ ಹಳ್ಳೂರ ಮಾತನಾಡಿದರು. ವೇದಿಕೆಯ ಮೇಲೆ ಸಂಸ್ಥೆಯ ಸದಸ್ಯರಾದ ಪ್ರಕಾಶ ಪಲ್ಲೇದ, ವೀರಣ್ಣ ಹುಯಿಲಗೋಳ, ಮಾಜಿ ಯೋಧ ವೀರಪ್ಪ ಕುಂಬಾರ, ಮಾಜಿ ಯೋಧ ಎಂ.ಎ. ಸಂಗನಾಳ ಮುಂತಾದವರಿದ್ದರು.ಸಂಸ್ಥೆಯ ಉಪಾಧ್ಯಕ್ಷೆ ಕಸ್ತೂರಿ ಧನ್ನೂರ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಶಿಕ್ಷಕ ಎಸ್.ಎಚ್. ಮಲ್ಲನಗೌಡ್ರ ಸ್ವಾಗತಿಸಿದರು. ಶಿಕ್ಷಕಿ ವಿಶಾಲಾಕ್ಷಿ ಶಾಸೆಟ್ಟಿ ನಿರೂಪಿಸಿದರು. ಮಕ್ಕಳಿಂದ ಹಾಡು, ಭಾಷಣ, ಮನರಂಜನೆಗಳು ನಡೆದವು. ಶಿಕ್ಷಕಿ ಕವಿತಾ ಬಂಡಿ ವಂದಿಸಿದರು.



ಗದುಗಿನ ಶ್ರೀ ವಿಶ್ವವಿನಾಯಕ ಸಮಾಜ ಸೇವಾ ಸಂಘದ ವತಿಯಿಂದ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ಡಾ. ಎಸ್.ಎಫ್. ವರವಿ ನೆರವೇರಿಸಿದರು. ನಿವೇದಿತಾ ಭೂಸನೂರುಮಠರನ್ನು ಸನ್ಮಾನಿಸಲಾಯಿತು. ವೀರಪ್ಪ ತೇಳಗಡೆ ಪರಿವಾರದಿಂದ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸಂಘದ ಗೌರವಾಧ್ಯಕ್ಷ ಬಸವರಾಜ್ ಬ್ಯಾಹಟ್ಟಿ, ಬಸವರಾಜ ಪಲ್ಲೇದ, ಅಧ್ಯಕ್ಷ ಯು.ಆರ್. ಭೂಸನೂರುಮಠ, ಸಹ ಕಾರ್ಯದರ್ಶಿ ವಿನೋದ ತೇಳಗಡೆ, ಕೋಶಾಧ್ಯಕ್ಷ ಮಯುದ್ದೀನ್ ಮಕಾಂದಾರ ಸೇರಿದಂತೆ ಪದಾಧಿಕಾರಿಗಳು ಭಾಗವಹಿಸಿದ್ದರು.

ಚುನಾವಣೆಯಲ್ಲಿ ಅತ್ಯುತ್ತಮ ಕಾರ್ಯನಿರ್ವಹಿಸಿದ ಬಿಎಲ್‌ಓಗಳಿಗೆ ಜಿಲ್ಲಾಡಳಿತದ ಗೌರವ

# ಮತಗಟ್ಟೆ ಅಧಿಕಾರಿಗಳಿಗೆ ಪ್ರಶಸ್ತಿ ಪ್ರದಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿಯಿಂದ ನಗರದ ಜಿಲ್ಲಾಡಳಿತ ಭವನದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಮತಗಟ್ಟೆ ಅಧಿಕಾರಿಗಳಿಗೆ (ಜಿಲ್ಲೆಯಲ್ಲಿನ ನಾಲ್ಕು ವಿಧಾನಸಭಾ ಕ್ಷೇತ್ರಗಳಿಂದ ತಲಾ ಮೂರು ಮತಗಟ್ಟೆ ಅಧಿಕಾರಿಗಳಿಗೆ) ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಶಿರಹಟ್ಟಿ ವಿಧಾನ ಸಭಾ ಕ್ಷೇತ್ರ: ಸೂಗಿಹಾಳ ಅಂಗನವಾಡಿ ಕಾರ್ಯಕರ್ತೆ ಅಶ್ವಿನಿ ಅಮ್ಮನವರ, ಬಿಜ್ಜೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ಬಿ.ಜಿ. ಅಂಗಡಿ, ಗೋವನಾಳ ಗ್ರಾಮ ಪಂಚಾಯತ್ ಬಿಲ್ ಕಲೆಕ್ಟರ್ ಎಚ್.ಎಸ್. ಮರಿಲಿಂಗನಗೌಡರ.

ಗದಗ ವಿಧಾನ ಸಭಾ ಕ್ಷೇತ್ರ: ಮಲ್ಲಸಮುದ್ರ ಅಂಗನವಾಡಿ ಕಾರ್ಯಕರ್ತೆ ರೇಶ್ಮಾ ಮಾಬೂಸಾಬ ಮುಲ್ಲಾನವರ, ಗದಗ-ಬೆಟಗೇರಿ ನಗರದ ಎಲೆಕ್ಟ್ರಿಷಿಯನ್ ಶಿರಾಜ್ ಅಹ್ಮದ್ ಎಸ್.ಘಟ್ಟದ್,



ಗದುಗಿನ ಅಂಗನವಾಡಿ ಕಾರ್ಯಕರ್ತೆ ಪರವೀನ್ ಬಾಬು ಎಸ್.ಅತ್ತಾರ.

**ರೋಣ ವಿಧಾನಸಭಾ ಕ್ಷೇತ್ರ:** ಗಜೇಂದ್ರಗಡ ಸರ್ಕಾರಿ ಪ್ರಾಥಮಿಕ ಶಾಲೆಯ ಸಹಶಿಕ್ಷಕರಾದ ಎಸ್.ಎಚ್. ಹಲಕುರ್ಕಿ, ಡಂಬಳದ ಅಂಗನವಾಡಿ ಕಾರ್ಯಕರ್ತೆ ಎಸ್.ಎಚ್. ಹಿರೇಮಠ, ಬೈರಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ಶಶಿಧರ ಆವಾರಿ.

ನರಗುಂದ ವಿಧಾನಸಭಾ ಕ್ಷೇತ್ರ : ಪಾಪನಾಶಿಯ ಅಂಗನವಾಡಿ ಕಾರ್ಯಕರ್ತೆ ಎಸ್.ಆರ್. ಅಂಗಡಿ, ಬಿ.ಎಸ್. ಬೇಲೇರಿಯ ಅಂಗನವಾಡಿ ಕಾರ್ಯಕರ್ತೆ ಸರಸ್ವತಿ ಎಮ್.ಹಿರೇಮಠ, ಮದಗುಣಕಿ ಅಂಗನವಾಡಿ ಕಾರ್ಯಕರ್ತೆ ಎಸ್.ಜಿ. ಮಾಮನಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಮತಗಟ್ಟೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಅಭಿನಂದನಾ ಪತ್ರ ಹಾಗೂ ಪ್ರಶಸ್ತಿ ನೀಡಿ ಗೌರವಿಸಿದರು.



# ಧರ್ಮಸ್ಥಳ ಸಂಘದಿಂದ ಗ್ರಾಮಗಳ ಅಭಿವೃದ್ಧಿ




**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ರಾಜ್ಯದಲ್ಲಿ ಗ್ರಾಮೀಣ ಪ್ರದೇಶದ ಹೆಣ್ಣುಮಕ್ಕಳಿಗೆ ಧರ್ಮಸ್ಥಳ ಸಂಘವು ಜೀವನಾಡಿಯಾಗಿದೆ ಎಂದು ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಅಭಿಪ್ರಾಯಪಟ್ಟರು.

ಪಟ್ಟಣದ ಟಿಎಂಇ ಬಿಎಡ್ ಕಾಲೇಜು ಸಭಾಂಗಣದಲ್ಲಿ ಧರ್ಮಸ್ಥಳ ಸಂಘದ ವತಿಯಿಂದ ವಿದ್ಯಾರ್ಥಿಗಳಿಗೆ ಕೊಡಮಾಡುವ ಸುಜ್ಞಾನನಿಧಿ ಶಿಷ್ಯವೇತನ ಚೆಕ್ ನೀಡಿ ಮಾತನಾಡಿದರು.

ಡಾ. ವೀರೇಂದ್ರ ಹೆಗ್ಗಡೆಯವರು ರಾಜ್ಯದ ಪ್ರತಿ ಗ್ರಾಮಗಳ ಅಭಿವೃದ್ಧಿ ಹಾಗೂ ವಿದ್ಯಾರ್ಥಿಗಳ ಏಳ್ಗೆಗಾಗಿ ಸಂಘದ ವತಿಯಿಂದ ಸಾಕಷ್ಟು ಸಹಕಾರ ನೀಡುತ್ತಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಮಹಿಳೆಯರಿಗೆ ಸಂಘದಿಂದ ಸಾಲ ಸೌಲಭ್ಯಗಳ ಸಹಕಾರದೊಂದಿಗೆ ಸ್ವಾವಲಂಬಿ ಜೀವನವನ್ನು ಸಾಗಿಸಲು ಅನುಕೂಲ ಮಾಡಿಕೊಟ್ಟಿದೆ. ಅಂತೆಯೇ, ವಿದ್ಯಾರ್ಥಿಗಳಿಗೆ ಹಲವಾರು ರೀತಿಯ ಶಿಷ್ಯ ವೇತನದ ಸಹಕಾರ ನೀಡುತ್ತಿದ್ದಾರೆ. ಅದರ ಸದುಪಯೋಗ ಪಡೆದು ಉನ್ನತ ಶಿಕ್ಷಣ ಪಡೆಯಿರಿ ಎಂದರು.

ಧರ್ಮಸ್ಥಳ ಸಂಘದ ಜಿಲ್ಲಾ ಯೋಜನಾಧಿಕಾರಿ ಸುಬ್ರಹ್ಮಣ್ಯ ಮಾತನಾಡಿ, ವಿದ್ಯಾರ್ಥಿಗಳಿಗೆ ಸುಜ್ಞಾನನಿಧಿ ಶಿಷ್ಯವೇತನ, ನಿರ್ಗತಿಕರ ಮಾಸಾಶನ, ದೇವಸ್ಥಾನಗಳ ಜೀರ್ಣೋದ್ಧಾರ, ಗಿಡಗಳ ವಿತರಣೆ, ಸರ್ಕಾರಿ ಶಾಲೆಗಳಿಗೆ ಬೆಂಚ್ ವಿತರಣೆ, ಪ್ರಗತಿ ರಕ್ಷಾ ಸೌಲಭ್ಯಗಳು ಸೇರಿದಂತೆ ನಮ್ಮ ಸಂಸ್ಥೆ ವತಿಯಿಂದ ನಾಡಿನಾದ್ಯಂತ ದೀನ-ದಲಿತರ, ಬಡ-ನಿರ್ಗತಿಕರ ಹಾಗೂ ಬಡ ವಿದ್ಯಾರ್ಥಿಗಳ ಏಳ್ಗೆಯೇ ಸಂಘದ ಧ್ಯೇಯವಾಗಿದೆ ಎಂದರು.

ಪಿಎಸ್‌ಐ ಶಂಭುಲಿಂಗಯ್ಯ ಎಸ್. ಹಿರೇಮಠ, ಮಂಜುನಾಥ ಗುಂಡಗತ್ತಿ, ಮತ್ತೂರು ಬಸವರಾಜ, ಶೈಲಜಾ, ಕೊಟ್ರೇಶ್, ವಿಜಯ್ ಕುಮಾರ್ ಮುಂತಾದವರಿದ್ದರು.

# ಒತ್ತುವರಿ ಭೂಮಿ ತೆರವಿಗೆ ರಂಭಾಪುರಿ ಶ್ರೀ ವಿರೋಧ

**■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**



ಜೀವನೋಪಾಯಕ್ಕಾಗಿ ಬಡವರು ಮಾಡಿರುವ ಒತ್ತುವರಿ ಭೂಮಿಯನ್ನು ತೆರವುಗೊಳಿಸುತ್ತಿರುವ ಅರಣ್ಯ ಇಲಾಖೆಯ ಕ್ರಮ ಸೂಕ್ತವಲ್ಲ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಅವರು ಗುರುವಾರ ಶ್ರೀ ರಂಭಾಪುರಿ ಪೀಠದ ಶ್ರಾವಣ ಪೂಜಾನುಷ್ಠಾನದ ಸಂದರ್ಭದಲ್ಲಿ ಭೇಟಿಯಾದ ಪತ್ರಕರ್ತರೊಂದಿಗೆ ಮಾತನಾಡುತ್ತಿದ್ದರು.

ಪರಿಸರ ಸಂರಕ್ಷಣೆ ವಿಚಾರದಲ್ಲಿ ಯಾರದೂ ವಿರೋಧವಿಲ್ಲ. ಆದರೆ ಒತ್ತುವರಿ ತೆರವು ನೆಪದಲ್ಲಿ ಬಡವರ ಭೂಮಿ ತೆರವುಗೊಳಿಸುತ್ತಿರುವುದು ಒಳ್ಳೆಯ ಬೆಳವಣಿಗೆಯಲ್ಲ. ಮಲೆನಾಡಿನಲ್ಲಿ ಸಣ್ಣ ಸಣ್ಣ ಬಡ ಕುಟುಂಬಗಳು ಬದುಕುತ್ತಿವೆ. 1-2 ಎಕರೆ ಭೂಮಿ ಸಾಗುವಳಿ ಮಾಡಿ ಬದುಕು ಕಟ್ಟಿಕೊಂಡವರುಂಟು.

ಅವರಿಗೆ ಯಾವುದೇ ತಿಳುವಳಿಕೆ ನೀಡದೆ ಕಾಫಿ ಗಿಡಗಳನ್ನು ಅರಣ್ಯ ಇಲಾಖೆ ಕತ್ತರಿಸಿ ಹಾಕುತ್ತಿರುವುದು ನೋವಿನ ಸಂಗತಿ.

ಇದರಿಂದ ಸಹಸ್ರಾರು ಬಡ ಕುಟುಂಬಗಳು ಬೀದಿಗೆ ಬರಲಿವೆ. ಸರ್ಕಾರ ಎಚ್ಚೆತ್ತುಕೊಂಡು ಬಡವರ ಭೂಮಿ ತೆರವುಗೊಳಿಸುತ್ತಿರುವುದನ್ನು ಕೂಡಲೇ ಸ್ಥಗಿತಗೊಳಿಸಬೇಕು. ಬಡವರು ಒತ್ತುವರಿ ಮಾಡಿರುವ ಭೂಮಿ ಅರಣ್ಯ ವ್ಯಾಪ್ತಿಗೆ ಬರುವುದಾದರೆ ಅದನ್ನು ಅರಣ್ಯ ಹಕ್ಕು ಕಾಯ್ದೆ ಅಡಿಯಲ್ಲಿ ಒತ್ತುವರಿ ಮಾಡಿರುವ ರೈತರಿಗೆ ಸಕ್ರಮ ಮಾಡಿಕೊಡಲಿ ಎಂದರು.

ಸಾವಿರಾರು ಎಕರೆ ಒತ್ತುವರಿ ಮಾಡಿರುವ ಭೂ ಮಾಲೀಕರು, ಕಾರ್ಪೋರೇಟ್ ಕಂಪನಿಗಳು ಮತ್ತು ಗಣಿಗಾರಿಕೆ ಮಾಡುತ್ತಿರುವವರ ಬಗೆಗೆ ಯಾವುದೇ ಕ್ರಮ ಕೈಗೊಳ್ಳದೆ ಕೇವಲ ಬಡವರು ಒತ್ತುವರಿ ಮಾಡಿರುವ ಭೂಮಿಯ ಮೇಲೆ ಇಂಥ ಕಠಿಣ ಕ್ರಮ ಒಳ್ಳೆಯದಲ್ಲ. ಅರಣ್ಯ ಮತ್ತು ಕಂದಾಯ ಇಲಾಖೆಯವರು ವಿಷಯವನ್ನು ಸರಿಯಾಗಿ ಪರಾಂಬರಿಸಿ ಬಡವರ ಒತ್ತುವರಿ ಕೈ ಬಿಡಬೇಕೆಂದು ಆಗ್ರಹಿಸಿದ್ದಾರೆ.

# ದೇಶಕ್ಕಾಗಿ ಸೇವೆ ಸಲ್ಲಿಸಿದ್ದು ನನ್ನ ಸೌಭಾಗ್ಯ

**■ವಿಜಯಸಾಕ್ಷಿ ಸುದ್ದಿ, ರೋಣ**

ಸೈನಿಕನಾಗಿ ಭವ್ಯ ಭಾರತ ದೇಶದ ಹಿತಕ್ಕಾಗಿ ಸೇವೆ ಸಲ್ಲಿಸಿದ್ದು ನನ್ನ ಸೌಭಾಗ್ಯವಾಗಿದೆ ಎಂದು ನಿವೃತ್ತ ಸೇನಾಧಿಕಾರಿ ಮುತ್ತಣ್ಣ ಭಜಂತ್ರಿ ಹೇಳಿದರು.

ಅವರು ಮಾರನಬಸರಿ ಗ್ರಾಮದ ಜಲಾಮೃತ ಕೆರೆ ದಡದಲ್ಲಿ ಗ್ರಾ.ಪಂ ವತಿಯಿಂದ ಜರುಗಿದ 78ನೇ ಸ್ವಾತಂತ್ರ್ಯ ದಿನಚಾರಣೆಯ ಧ್ವಜಾರೋಹಣವನ್ನು ನೆರವೇರಿಸಿ ಮಾತನಾಡಿದರು.

25 ವರ್ಷಗಳಿಗೂ ಹೆಚ್ಚು ಕಾಲ ನಾನು ಸೈನಿಕನಾಗಿ ಕಾರ್ಯನಿರ್ವಹಿಸಿದ್ದೇನೆ. ಈ ಸಮಯದಲ್ಲಿ ಜಮ್ಮು ಸೇರಿದಂತೆ ಅನೇಕ ಭಾಗಗಳಲ್ಲಿ ದೇಶದ ರಕ್ಷಣೆ ಕಾರ್ಯನಿರ್ವಹಿಸಿದ್ದು ಇಂದಿಗೂ ನಮಗೆ ಹೆಮ್ಮೆಯಿದೆ. ಈಗಲೂ ಸಹ ಸೇವೆಯನ್ನು ಸಲ್ಲಿಸಬೇಕು ಎಂಬ ಹಂಬಲವಿದೆ. ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ದೇಶ ಸೇವೆಗೆ ತಯಾರಗಬೇಕು



ಎಂದು ಕರೆ ನೀಡಿದರು.

ಗ್ರಾಮದ ಯುವಕರು ಹಾಗೂ ವಿದ್ಯಾರ್ಥಿಗಳು ದೇಶದ ಇತಿಹಾಸವನ್ನು ತಿಳಿದುಕೊಳ್ಳುವುದು ಅವಶ್ಯಕವಾಗಿದೆ. ನಮ್ಮ ಪೂರ್ವಜರ ಹೋರಾಟದ ಫಲವಾಗಿ ನಮಗೆ ಸ್ವಾತಂತ್ರ ಸಿಕ್ಕಿದೆ ಎನ್ನುವುದನ್ನು ಇಂದಿನ ಪೀಳಿಗೆ ಮರೆಯುಬಾರದು. ಭಾರತ ಗಟ್ಟಿಗೊಳ್ಳಲು ನಮ್ಮಲ್ಲಿ ಏಕತೆ, ಸೌಹಾರ್ದತೆ ಅಡಕವಾಗಿರಬೇಕು. ಅಂದಾಗ ಮಾತ್ರ ದೇಶದ ಬಲವರ್ಧನೆ ಸಾಧ್ಯ ಎಂದ ಅವರು, ದೇಶ ಸೇವೆಯೇ ಈಶ ಸೇವೆ ಎನ್ನುವುದು ಸುಳ್ಳಲ್ಲ ಎಂದರು.

ನಿವೃತ್ತ ಸೈನಿಕ ಶಂಭು ಸರ್ವಿ ಹಾಗೂ ಮುತ್ತಣ್ಣ ಭಜಂತ್ರಿ ಧ್ವಜಾರೋಹಣ ನೆರವೇರಿಸಿದರು.

ಸೈನಿಕ ಬಸವರಾಜ ಮ್ಯಾಗೇರಿ, ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ, ಉಪಾಧ್ಯಕ್ಷ ಮಂಜುಳಾ ಮಾದರ, ಶಿವಕುಮಾರ ದಿಂಡೂರ, ವೀರಪ್ಪ ನಿಡಗುಂದಿ, ಅಲ್ಲಾಸಾಬ ಮೋತೆಖಾನ್, ಮಹ್ಮದ ಸವಡಿ, ದಿಲ್‌ಶ್ಯಾದಬೇಗಂ ದೋಟಿಹಾಳ, ಹನಮವ್ವ ತಳವಾರ, ಉಮಾ ಚಿಗರಿ, ಎಸ್.ಆರ್. ಸಂಕನೂರ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಲಕ್ಷ್ಮೇಶ್ವರದ ಹಲವೆಡೆ ಧ್ವಜಾರೋಹಣ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

78ನೇ ಸ್ವಾತಂತ್ರ್ಯೋತ್ಸವ ಆಚರಣೆಯನ್ನು ಗುರುವಾರ ಪಟ್ಟಣ ಸೇರಿ ತಾಲೂಕಿನಾದ್ಯಂತ ಸಂಭ್ರಮ, ವಿಶೇಷತೆಯಿಂದ ಆಚರಿಸಲಾಯಿತು.

ಪಟ್ಟಣದ ಕಿತ್ತೂರು ಚನ್ನಮ್ಮ ವೃತ್ತದಲ್ಲಿ ಪಂಚಮಸಾಲಿ ಸಮಾಜದ ಅಧ್ಯಕ್ಷ ಮಂಜುನಾಥ ಮಾಗಡಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ತಾ.ಪಂ ಕಚೇರಿಯಲ್ಲಿ ಆಡಳಿತಾಧಿಕಾರಿ ಎಂ.ವ್ಹಿ. ಚಳಗೇರಿ ಧ್ವಜಾರೋಹಣ ನೆರವೇರಿಸಿದರು. ಇಓ ಕೃಷ್ಣಪ್ಪ ಧರ್ಮರ, ಸಿಬ್ಬಂದಿಗಳು ಇದ್ದರು.

ಭೂ-ಮಾಪನ ಕಚೇರಿಯಲ್ಲಿ ಭೂ ಮಾಪನಾಧಿಕಾರಿ ವಿದ್ಯಾ ತಳೇಕರ ಧ್ವಜಾರೋಹಣ ನೆರವೇರಿಸಿದರು. ಆರ್.ಬಿ. ಕುಂದಗೋಳ, ಮಾಜಿ ಸೈನಿಕರಾದ ವಿ.ಎಸ್. ಹಿರೇಮಠ, ಸಿ.ಎಸ್. ಹಿರೇಮಠ ಮಾರುತಿ ಬಟ್ಟೂರ, ಹುಡೇದ ಸೇರಿ ಹಲವರಿದ್ದರು. ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ಈರಪ್ಪ ರಿತ್ತಿ, ಸಮುದಾಯ ಆರೋಗ್ಯ ಕೇಂದ್ರದಲ್ಲಿ ಡಾ.ಶ್ರೀಕಾಂತ ಕಾಟೇವಾಲೆ, ಉಮಾವಿದ್ಯಾಲಯದಲ್ಲಿ ಮುಖ್ಯೋಪಾಧ್ಯಾಯ ಎಸ್.ಎಚ್. ಪೂಜಾರ, ಎಂ.ಎ. ಕಾಲೇಜ್‌ನಲ್ಲಿ ಪ್ರಾಚಾರ್ಯ ಬಿ.ಎಸ್. ಉಗ್ರದ, ನ್ಯಾಯಾಲಯದಲ್ಲಿ ಹಿರಿಯ ವಿಭಾಗದ ನ್ಯಾಯಾಧೀಶರಾದ ಬಿ.ವೈ. ಕರಿಗುದರಿ, ಕೋರ್ಟ್ ಸರ್ಕಲ್‌ನಲ್ಲಿ ವಕೀಲರ ಸಂಘದ ಅಧ್ಯಕ್ಷ ಬಿ.ಎಸ್. ಬಾಳೇಶ್ವರಮಠ, ಪಟ್ಟಣದ ಗಾಂಧಿ ಮಂದಿರದಲ್ಲಿ ಭರತರಾಜ ಬರಿಗಾಲಿ ಧ್ವಜಾರೋಹಣ ನೆರವೇರಿಸಿದರು. ಪಟ್ಟಣದ ಇನ್ನಿತರ ಸರ್ಕಾರಿ ಇಲಾಖೆಗಳಲ್ಲಿ, ಪಟ್ಟಣ ಸೇರಿ ತಾಲೂಕಿನ ಎಲ್ಲ ಶಾಲಾ-ಕಾಲೇಜುಗಳಲ್ಲಿ, ತಾಲೂಕಿನ ವಿವಿಧ ಗ್ರಾ.ಪಂಗಳಲ್ಲಿ ಧ್ವಜಾರೋಹಣ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನೆರವೇರಿದವು.

# ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಯಂತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಪ್ರತಿಮ ಸ್ವಾತಂತ್ರ್ಯ ಹೋರಾಟಗಾರ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಜಯಂತಿಯ ಪ್ರಯುಕ್ತ ಗುರುವಾರ ಕ್ರಾಂತಿ ಸೇನಾ ಗದಗ ಜಿಲ್ಲಾ ಸಂಘಟನೆ ವತಿಯಿಂದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಪ್ರತಿಮೆಗೆ ಹೂಮಾಲೆಯನ್ನು ಹಾಕಿ ಘೋಷಣೆ ಕೂಗಿ ಗೌರವ ನಮನಗಳನ್ನು ಸಲ್ಲಿಸಲಾಯಿತು.

ಕ್ರಾಂತಿ ಸೇನಾ ಜಿಲ್ಲಾ ಗೌರವ ಕಾರ್ಯದರ್ಶಿ ಪ್ರವೀಣ ಹಬೀಬ ಮಾತನಾಡಿ, ನಮ್ಮ ದೇಶಕ್ಕಾಗಿ, ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟಿಷರ ವಿರುದ್ಧ ಸಮರ ಸಾರಿದ ಅಪ್ರತಿಮ ಕ್ರಾಂತಿಕಾರಿ ಕ್ರಾಂತಿವೀರ ಸಂಗೊಳ್ಳಿ




ರಾಯಣ್ಣ ಅವರಿಗೆ ಯುವಕರು ಗೌರವ ನಮನಗಳನ್ನು ಸಲ್ಲಿಸುವದು ಹಾಗೂ ಅವರನ್ನು ಮನದಲ್ಲಿ ಸ್ಮರಿಸುವ ಕರ್ತವ್ಯ ನಮ್ಮ ನಿಮ್ಮೆಲ್ಲರದಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕ್ರಾಂತಿ ಸೇನಾ ಕಾರ್ಯದರ್ಶಿ ಶಿವಕುಮಾರ್ ಕುಂಬಾರ್, ಕಾರ್ಯದರ್ಶಿ ಪವನ್ ಪುರದ, ಕಿರಣ್ ಪಟ್ಟಣಶೆಟ್ಟಿ, ಬಸವರಾಜ್ ಅಸುಂಡಿ, ಪ್ರದೀಪ್ ಸರ್ವದೆ, ರವಿತೇಜ ಶ್ಯಾವಿ, ರಾಮಣ್ಣ ನವಲಗುಂದ್, ಸುನಿಲ್, ಶಿವಾನಂದ್, ವಿನೋದ್, ದರ್ಶನ್, ವಿಜಯ್, ಬಸವರಾಜ್ ತಟ್ಟಿ ಮುಂತಾದವರು ಉಪಸ್ಥಿತರಿದ್ದರು.

# ದೇಶದ ಅಭಿವೃದ್ಧಿಯಲ್ಲಿ ಕೈಜೋಡಿಸೋಣ



**■ವಿಜಯಸಾಕ್ಷಿ ಸುದ್ದಿ, ನರೇಗಲ್**

ಇಲ್ಲಿನ ಪಟ್ಟಣ ಪಂಚಾಯತಿಯಲ್ಲಿ ಧ್ವಜಾರೋಹಣವನ್ನು ನೆರವೇರಿಸಲಾಯಿತು. ಪ.ಪಂ ಮುಖ್ಯಾಧಿಕಾರಿ ನಿಡಶೇಶಿ ಧ್ವಜಾರೋಹಣವನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಮ್ಮ ದೇಶ ಸ್ವಾತಂತ್ರ್ಯಗೊಂಡು 77 ವರ್ಷಗಳು ಕಳೆದವು.

ಈ ಅವಧಿಯಲ್ಲಿ ನಮ್ಮ ದೇಶ ಅಭಿವೃದ್ಧಿಯ ದೃಷ್ಟಿಯಿಂದ ಮುಂಚೂಣಿಯಲ್ಲಿದೆ.

ಆದರೆ ಇದು ಜಗತ್ತಿನ ಮೊದಲನೆ ದೇಶವೆಂದು ಹೆಸರಾಗಬೇಕಾದರೆ ನಮ್ಮೆಲ್ಲರ ಕಾಣಿಕೆ ಅವಶ್ಯಕವಾಗಿದೆ.

ಇಂದಿನ ದಿನ ನಾವೆಲ್ಲರೂ ದೇಶದ ಅಭಿವೃದ್ಧಿಯಲ್ಲಿ ಪ್ರಾಮಾಣಿಕವಾಗಿ ಪಾಲ್ಗೊಳ್ಳುತ್ತೇವೆ ಎಂಬ ಸಂಕಲ್ಪವನ್ನು ಮಾಡೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ.ಪಂ ಮಾಜಿ ಅಧ್ಯಕ್ಷರು, ಪ.ಪಂ ಸದಸ್ಯರು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

**ಪೊಲೀಸ್ ಠಾಣೆಯಲ್ಲಿ:** ಪಟ್ಟಣದ ಪೊಲೀಸ್ ಠಾಣೆಯಲ್ಲಿ ಸ್ವಾತಂತ್ರ ದಿನೋತ್ಸವವವನ್ನು ಆಚರಿಸಲಾಯಿತು.

ಪಿಎಸ್‌ಐ ಐಶ್ವರ್ಯ ನಾಗರಾಳ ಧ್ವಜಾರೋಹಣ ನೆರವೇರಿಸಿದರು. ನಮ್ಮ ಹಿರಿಯರು ತಮ್ಮ ಶಿಸ್ತು, ಸಂಯಮದಿಂದ ದೇಶದ ಸ್ವಾತಂತ್ರ್ಯಕ್ಕಾಗಿ ದುಡಿದರು ಮತ್ತು ಮಡಿದರು. ನಾವು ಶಿಸ್ತು ಮತ್ತು ಸಂಯಮಗಳಿಂದ ನಡೆದಿದ್ದರೆ ಆದರೆ ನಮ್ಮ ಜೀವನದಲ್ಲಿಯೂ ನಾವು ಅಭಿವೃದ್ಧಿಯನ್ನು ಕಾಣಬಹುದು.

ನಾಗರಿಕರು ತಮ್ಮ ಉತ್ತಮ ಜೀವನ ನಿರ್ವಹಣೆಗಾಗಿ ಸರಕಾರ ಮಾಡಿರುವ ಕಾನೂನುಗಳ ಪಾಲನೆಯನ್ನು ಮಾಡಬೇಕು.

ಇದರಿಂದ ಜೀವನದಲ್ಲಿ ನೆಮ್ಮದಿ ದೊರಕುತ್ತದೆ ಎಂದು ಅವರು ಹೇಳಿದರು. ಠಾಣೆಯ ಸಿಬ್ಬಂದಿ ವರ್ಗದವರು ಈ ಸಂದರ್ಭದಲ್ಲಿ ಪಾಲ್ಗೊಂಡಿದ್ದರು.

# ಮುನ್ಸಿಪಲ್ ಹೈಸ್ಕೂಲ್‌ನಲ್ಲಿ ಸ್ವಾತಂತ್ರ್ಯೋತ್ಸವ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆಯ ಮುನ್ಸಿಪಲ್ ಹೈಸ್ಕೂಲ್‌ನ ಆವರಣದಲ್ಲಿ 78ನೇ ಸ್ವಾತಂತ್ರ್ಯೋತ್ಸವ ಧ್ವಜಾರೋಹಣವನ್ನು ನಗರಸಭೆ ಪೌರಾಯುಕ್ತ ಮಹೇಶ ಪೋತದಾರ ನೇರವೇರಿಸಿ, ಧ್ವಜವಂದನೆ ಮತ್ತು ಪಥಸಂಚಲನೆ ಮಾಡಿದರು.

ಈ ಸಂದರ್ಭದಲ್ಲಿ ಹೆಚ್.ಎ. ಬಂಡಿವಡ್ಡರ, ಪರಶುರಾಮ ಶೇರಖಾನೆ, ಟಿ.ಎಚ್. ದ್ಯಾವನೂರ, ಡಿ.ಎಚ್. ನದಾಫ್, ಎ.ಎನ್. ಪುಣೇಕರ, ಸುಜಾತಾ ಮಾಗಡಿ, ಎಂ.ಎಸ್. ಸೋನಾವನೆ, ವ್ಹಿ.ಬಿ. ಕರಮುಡಿ, ಎಸ್.ಬಿ. ಪಾಟೀಲ, ಡಿ. ರಮೇಶ,



ಆರ್.ಜಿ. ಹಿರೇಮಠ, ಅಮನ್ ಗುಳೇದಗುಡ್ಡ, ವಾಯ್.ಎಸ್. ನೂಕಾಪೂರ, ಜೆ.ಬಿ. ಅಂಗಡಿ, ಕೆ.ಟಿ. ವಡ್ಡಿನ, ಶಂಕರ ಹಟ್ಟಿ, ಪವನ ಗೊರವರ, ಎಂ.ಆರ್. ತಹಸೀಲ್ದಾರ, ಯು. ಪಾರ್ವತಿ, ಗಿರೀಶ ಮಲ್ಲಾಪೂರ, ಭೀಮಣ್ಣ ಸಂಗಾಪೂರ, ಅನಸಮ್ಮ ಬೇವಿನಮರದ, ಆರ್.ಎಂ. ಜಾಗನೂರ, ಎಸ್ತೇರ ಜೆ. ಗೋಕಾವಿ, ಹೆಚ್.ಆರ್. ಪಾಟೀಲ, ಟಿ.ಆರ್. ಬೇವಿಮರದ, ಎನ್. ಎಮ್. ತಳಗೇರಿ, ಎಸ್.ಎನ್. ದೊಡ್ಡಮನಿ ಉಪಸ್ಥಿತರಿದ್ದರು.

# ಮಕ್ಕಳಲ್ಲಿ ರಾಷ್ಟ್ರಾಭಿಮಾನ ಬೆಳೆಯಲಿ




**■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಭಾರತ ಸ್ವಾತಂತ್ರ್ಯ ಪಡೆದು 78 ವರ್ಷಗಳಾಯಿತು. ಎಲ್ಲ ವರ್ಗದ ಜನತೆಯಲ್ಲಿ ದೇಶಾಭಿಮಾನ ಮತ್ತು ರಾಷ್ಟ್ರ ಶ್ರದ್ಧೆ ಬೆಳೆದುಕೊಂಡು ಬರಬೇಕಾಗಿದೆ. ಬೆಳೆಯುವ ಮಕ್ಕಳಲ್ಲಿ ರಾಷ್ಟ್ರ ಭಕ್ತಿ-ಸಾಮರಸ್ಯ ಮತ್ತು ಸೌಹಾರ್ದತೆಗಳನ್ನು ಬೆಳೆಸುವ ಅಗತ್ಯವಿದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಶ್ರೀ ರಂಭಾಪುರಿ ಪೀಠದ ಶ್ರೀ ಜಗದ್ಗುರು ರುದ್ರಮುನೀಶ್ವರ ವಸತಿ ಪ್ರೌಢಶಾಲೆ ಹಾಗೂ ಶ್ರೀ ವೀರಭದ್ರಸ್ವಾಮಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ 78ನೇ ಸ್ವಾತಂತ್ರ್ಯೋತ್ಸವ ಧ್ವಜಾರೋಹಣ ನೆರವೇರಿಸಿ ಆಶೀರ್ವಚನ ನೀಡುತ್ತಿದ್ದರು.

ಸ್ವಾತಂತ್ರ್ಯ ಎಂದರೆ ಸ್ವೇಚ್ಛಾಚಾರಿಯಾಗಿ ಬಾಳುವುದಲ್ಲ. ದೇಶಕ್ಕಾಗಿ, ನಾಡು ನುಡಿಗಾಗಿ ನಮ್ಮನ್ನು ನಾವು ಅರ್ಪಿಸಿಕೊಂಡು ಕಾರ್ಯ ಕೈಗೊಂಡರೆ ಯಶಸ್ಸು ಕಟ್ಟಿಟ್ಟ ಬುತ್ತಿ. ಜಾತ್ಯಾತೀತವಗಿ ಪಕ್ಷಾತೀತವಾಗಿ ನಮ್ಮ ರಾಜಕೀಯ ಧುರೀಣರು ಶ್ರಮಿಸಿ ಸದೃಢ ಸಶಕ್ತ ದೇಶವನ್ನು ಕಟ್ಟುವ ಸಂಕಲ್ಪ ಅವರದಾಗಲಿ ಎಂದರು. ಹುಡುಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯರು, ಕಡೆನಂದಿಹಳ್ಳಿ ರೇವಣಸಿದ್ಧೇಶ್ವರ ಶಿವಾಚಾರ್ಯರು ಹಾಗೂ ಕಾರ್ಜುವಳ್ಳಿ ಹಿರೇಮಠದ ಸದಾಶಿವ ಶಿವಾಚಾರ್ಯರು ಉಪಸ್ಥಿತರಿದ್ದರು. ಪ್ರೌಢ ಶಾಲಾ ಮುಖ್ಯೋಪಾಧ್ಯಾಯೆ ಸುಜಾತಾ ಅಳವಂಡಿ, ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯೆ ಮಹಾದೇವಿ ಪಾಟೀಲ, ಗ್ರಾ.ಪಂ ಸದಸ್ಯರಾದ ಜಗದೀಶ್ಚಂದ್ರ ಮತ್ತು ಮಹೇಶಾಚಾರಿ ಹಾಗೂ ಸಹಶಿಕ್ಷಕರು, ಅಭಿಮಾನಿಗಳು ಉಪಸ್ಥಿತರಿದ್ದರು. ದೈಹಿಕ ಶಿಕ್ಷಕ ನಿಜಗುಣಿ ಕಟ್ಟೇಗೌಡರು ಕಾರ್ಯಕ್ರಮ ನಿರೂಪಿಸಿದರು.

## ಸ್ವಾತಂತ್ರ್ಯ ಹೋರಾಟಗಾರರ ಸ್ಮರಣೆ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ಸ್ಮರಣೆ ಅಗತ್ಯ ಎಂದು ಎಸ್‌ಡಿಎಂಸಿ ಅಧ್ಯಕ್ಷ ಮಾಹಾಂತೇಶ ಮಾನೇಗಾರ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆ (ಆರ್.ಎಂ.ಎಸ್.ಎ) ಯಲ್ಲಿ 78ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ದೇಶಕ್ಕೆ ಸ್ವಾತಂತ್ರ್ಯ ತಂದುಕೊಡಲು ಸಾವಿರಾರು ಮಹನೀಯರು ಹೋರಾಡಿದ ಫಲವಾಗಿ ಇಂದು ನಾವೆಲ್ಲರೂ ನೆಮ್ಮದಿಯಿಂದ ಬದುಕು ಸಾಗಿಸುತ್ತಿದ್ದೇವೆ. ಇಂತಹ ಮಹನೀಯರು ತಮ್ಮ ಜೀವದ ಹಂಗು ತೊರೆದು ತಮ್ಮ ಪ್ರಾಣವನ್ನೇ ದೇಶಕ್ಕಾಗಿ ಮುಡಿಪಾಗಿಟ್ಟರು. ಇಂತಹವರ ಸ್ಮರಣೆ ಅಗತ್ಯವಾಗಿದೆ ಎಂದರು.

ಶಾಲಾ ಪ್ರಧಾನ ಗುರು ಎಸ್.ವಿ. ತಿಮ್ಮಾಪೂರ, ಎಲ್.ಬಿ. ರಾಠೋಡ, ಜಿ.ಐ. ಪಾಟೀಲ್, ಶರಣು ಪೂಜಾರ, ನೂರಅಹ್ಮದ ನಧಾಫ್, ಮೈಲಾರಪ್ಪ ಮಾಗಳದ, ಜಿ.ಎಂ. ಫಿರಂಗಿ, ಬಸವರಾಜ ಗೌರಿಮನಿ, ಎಸ್‌ಡಿಎಂಸಿ ಉಪಾಧ್ಯಕ್ಷ ಶಕುಂತಲಾ ಕಮ್ಮಾರ, ವಿ.ವಿ. ಕರಿಗಾರ, ಮಾಹಾಂತೇಶ ಕೆಂಚನಾಯ್ಕರ್ ಇದ್ದರು.




ಗದುಗಿನ ಉಮಾದ್ ಕಮಿಟಿಯಲ್ಲಿ ಸ್ವಾತಂತ್ರ್ಯ ದಿನವನ್ನು ಆಚರಿಸಲಾಯಿತು. ಗೌರವಾಧ್ಯಕ್ಷರಾದ ಜನಾಬ್ ಸಾದಿಕ್ ಬಿ.ನರಗುಂದ್ ಅವರು ಧ್ವಜಾರೋಹಣ ನೆರವೇರಿಸಿ, ದೇಶದ ಜನತೆಗೆ ಸ್ವಾತಂತ್ರೋತ್ಸವದ ಶುಭಕೋರಿದರು. ಅಧ್ಯಕ್ಷರಾದ ಜನಾಬ್ ರಶೀದಿಸಾಬ್ ಮದರಂಗಿ, ಹಾಜಿ ರಿಯಾಜ್ ಅತ್ತಾರ್, ಕಾರ್ಯದರ್ಶಿ ಸೈಯದ್ ಮಜಹರುದ್ದಿನ ಖಾಜಿ ಮಾತನಾಡಿದರು. ವೇದಿಕೆಯ ಮೇಲೆ ಕಮಿಟಿಯ ಸದಸ್ಯರಾದ ಜನಾಬ ಮುನೀರ್ ಅಹ್ಮದ್, ಡಾ. ಎಂ.ಡಿ. ಸಾಮುದ್ರಿ, ಜನಾಬ್ ಮುನ್ನಾ ರಶ್ಮಿ, ಜನಾಬ್ ಬಾಬಾ ನರಗುಂದ, ಜನಾಬ ಇಸ್ಮಾಯಿಲ್ ನರಗುಂದ ಉಪಸ್ಥಿತರಿದ್ದರು.

## ಸ್ವಾತಂತ್ರ್ಯ ಸೇನಾನಿಗಳ ತ್ಯಾಗ ಅವರ



■ವಿಜಯಸಾಕ್ಷಿ ಸುದ್ದಿ, ಡಂಬಳ

ಸ್ವಾತಂತ್ರ್ಯ ಹೋರಾಟಗಾರರ ಮಾರ್ಗವನ್ನು ಇಂದಿನ ಯುವ ಪೀಳಿಗೆ ಅನುಸರಿಸುವ ಅಗತ್ಯವಿದೆ. ದೇಶಕ್ಕಾಗಿ ಅವರ ತ್ಯಾಗದ ಬದುಕು ಅನುಕರಣೀಯ ಎಂದು ಉಪತಹಸೀಲ್ದಾರ ಸಿ.ಕೆ. ಬೂಳವಟಗಿ ಹೇಳಿದರು.

ಡಂಬಳ ಗ್ರಾಮದ ಸರ್ಕಾರಿ ಉರ್ದು ಶಾಲೆಯ ಆವರಣದಲ್ಲಿ 78ನೇ ಸ್ವಾತಂತ್ರ್ಯೋತ್ಯವ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಬಶೀರಹಮ್ಮದ ತಾಂಬೋಟಿ, ಮರಿಯಪ್ಪ ಸಿದ್ದನ್ನವರ, ಬುಡ್ನೆಸಾಬ ಅತ್ತಾರ ಮಾತನಾಡಿ, ದೇಶದ ಸ್ವಾತಂತ್ರೋತ್ಯಕ್ಕಾಗಿ ನಡೆದ ಚಳುವಳಿಯಲ್ಲಿ ಭಾಗಿಯಾದ ಮಹನೀಯರ ತ್ಯಾಗ-ಬಲಿದಾನಗಳನ್ನು ನೆನಪಿಸಿಕೊಳ್ಳುವುದು ಮತ್ತು ಅದನ್ನು ಮುಂದಿನ ಪೀಳಿಗೆಗೆ ತಿಳಿಸಲು ದೇಶಾದ್ಯಂತ ಈ ದಿನವನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ದೇಶದ ಸ್ವಾತಂತ್ರ್ಯಕ್ಕಾಗಿ ದುಡಿದು, ಮಡಿದ ಹೋರಾಟಗಾರರ ಜೀವನವು ನಮ್ಮ ವಿದ್ಯಾರ್ಥಿ ಸಮುದಾಯಕ್ಕೆ ಎಂದೆಂದಿಗೂ ಸ್ಪೂರ್ತಿದಾಯಕ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಎಂ.ಜೆ. ಕಾಸ್ತಾರ ಧ್ವಜಾರೋಣವನ್ನು ನೆರವೇರಿಸಿದರು. ಕಾರ್ಯಕ್ರಮದಲ್ಲಿ ಕಂದಾಯ ನಿರೀಕ್ಷಕರು ಪ್ರಭು ಭಾಗಲಿ, ಎಮ್.ಎಮ್. ವಿಬೂತಿ, ಮುಖ್ಯೋಪಾಧ್ಯಾಯ ಡಿ.ಕೆ. ಹೊಳೆಮ್ಮನವರ, ಎಸ್‌ಡಿಎಂಸಿ ಉಪಾಧ್ಯಕ್ಷೆ ಆಸ್ಮಾ ಆಲೂರ, ಹುಸೇನಸಾಬ ಹೊಸಭಾವಿ, ಯುವ ನೇತಾರ ಜಾಕೀರ ಮೂಲಿಮನಿ, ರಾಜೇಸಾಬ ಹೊಂಬಳ, ಗೌಸುಸಾಬ ಡಾಲಾಯತ, ಮೈನುದ್ದಿನ ಆಲೂರ, ಬುಡ್ನೆಸಾಬ ಮೂಲಿಮನಿ, ಬಾಕ್ಷಿಸಾಬ ತಾಂಬೋಟಿ, ಎಸ್‌ಡಿಎಂಸಿ ಸದಸ್ಯರು, ವಿದ್ಯಾರ್ಥಿಗಳು ಇದ್ದರು.



ರಾಜ್ಯದ ಕಾನೂನು ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ್ ಅವರ 71ನೇ ವರ್ಷದ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಅವರನ್ನು ಗುರುವಾರ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾ ಗೌರವ ಅಧ್ಯಕ್ಷರು ಹಾಗೂ ಗದಗ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಗದಗ ತಾಲೂಕು ಅಧಿಕಾರಿಗಳಾಗಿರುವ ಡಾ. ಬಸವರಾಜ ಬಳ್ಳಾರಿ ಅವರು ಸನ್ಮಾನಿಸಿ, ಗೌರವಿಸಿ ಶುಭ ಕೋರಿದರು.

### ಸಾರ್ವಜನಿಕ ಧ್ವಜಾರೋಹಣದಲ್ಲಿ ಸಚಿವ ಎಚ್.ಕೆ. ಪಾಟೀಲ ಅಭಿಮತ

# ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಅಭಿವೃದ್ಧಿ

■ವಿಜಯಸಾಕ್ಷಿ ಸುದ್ದಿ, ಗದಗ

ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ರಾಜ್ಯದ ಒಂದು ಕೋಟಿಗೂ ಹೆಚ್ಚು ಕುಟುಂಬಗಳನ್ನು ಬಡತನ ರೇಖೆಯಿಂದ ಮೇಲೆತ್ತುವ ಮೂಲಕ ಬಹುದೊಡ್ಡ ಆರ್ಥಿಕ, ಸಾಮಾಜಿಕ ಅಭಿವೃದ್ಧಿಗೆ ಕಾರಣೀಭೂತರವಾಗಿವೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಗುರುವಾರ ಜಿಲ್ಲಾಡಳಿತದಿಂದ ಜರುಗಿದ 78ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯಲ್ಲಿ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

2023ರ ವಿಧಾನಸಭೆ ಚುನಾವಣೆ ನಂತರ ಚುನಾವಣಾ ಭರವಸೆಯ ಮುಂದುವರಿದ ಭಾಗವಾಗಿ ಪಂಚ ಗ್ಯಾರಂಟಿಗಳು ಘೋಷಣೆಯಾದವು. ಈ ಗ್ಯಾರಂಟಿಗಳ ಮೂಲಕ ಬಡತನವನ್ನು ಬೇರು ಸಹಿತ ಕಿತ್ತೊಗೆಯುವ ಕ್ರಾಂತಿಕಾರಕ ಕಾರ್ಯಕ್ರಮ ಜಾರಿಗೆ ಬಂದು ವರ್ಷಕ್ಕೆ ರಾಜ್ಯದಲ್ಲಿ 58 ಸಾವಿರ ಕೋಟಿ ರೂ.ಗಳ ಪಂಚ ಗ್ಯಾರಂಟಿ ಯೋಜನೆ ಜಾರಿಯಾಯಿತು ಎಂದರು.

ಅನ್ನಭಾಗ್ಯ ಯೋಜನೆ ಬಡವರಿಗೆ, ಕೂಲಿಕಾರರಿಗೆ, ಶ್ರಮಿಕರಿಗೆ ವರದಾನವಾಗಿದೆ. 5 ಕೆ.ಜಿ ಅಕ್ಕಿ ಹಾಗೂ 5 ಕೆ.ಜಿ ಅಕ್ಕಿ ಬದಲಿಗೆ ನೇರ ಹಣ ವರ್ಗಾವಣೆಗೆ ಸರಕಾರ ನಿರ್ಣಯಿಸಿತು. ಗದಗ ಜಿಲ್ಲೆಯೊಂದರಲ್ಲೇ ಏಪ್ರೀಲ್-2024ರಲ್ಲಿ ಜಿಲ್ಲೆಯ ನೋಂದಾಯಿತ ಅರ್ಹ ಒಟ್ಟು 2,54,144 ಅಂತ್ಯೋದಯ ಹಾಗೂ



ಬಿ.ಪಿ.ಎಲ್ ಪಡಿತರ ಕುಟುಂಬಗಳು ಅಂದರೆ ಒಟ್ಟು 8,23,645 ಪಡಿತರ ಫಲಾನುಭವಿ ಸದಸ್ಯರುಗಳಿಗೆ ಒಟ್ಟು ರೂ.12 ಕೋಟಿಗಳನ್ನು ನೇರವಾಗಿ ನಗದು ವರ್ಗಾವಣೆ ಮೂಲಕ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ ಎಂದು ಹೇಳಿದರು.

ಗೃಹಜ್ಯೋತಿ ಯೋಜನೆಯಡಿ ಒಟ್ಟಾರೆ ಜಿಲ್ಲೆಯ ಅರ್ಹ ಕುಟುಂಬಗಳಿಗೆ ಈ ಯೋಜನೆಯಡಿ 89.32 ಕೋಟಿಗೂ ಅಧಿಕ ಹಣವನ್ನು ನೀಡಲಾಗಿದೆ. ಗೃಹಲಕ್ಷ್ಮೀ ಯೋಜನೆಯು ದೇಶದಲ್ಲಿಯೇ ಅತಿ ದೊಡ್ಡ ಆರ್ಥಿಕ ಭದ್ರತಾ ಯೋಜನೆಯಾಗಿದ್ದು, ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಗೃಹಲಕ್ಷ್ಮೀ ಯೋಜನೆ ಸಹಕಾರಿಯಾಗಿದೆ. ಈ ಎಲ್ಲ ಯೋಜನೆಗಳ ಮೂಲಕ ಕ್ರಾಂತಿಕಾರಕ ಹೆಜ್ಜೆಯಿಟ್ಟು ನಮ್ಮ ರಾಜ್ಯ ಮುನ್ನುಗ್ಗುತ್ತಿದೆ ಎಂದರು.

ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಕಳೆದ 15 ತಿಂಗಳಲ್ಲಿ ಅನೇಕ ಸುಧಾರಣಾ ಕ್ರಮಗಳನ್ನು ಜಾರಿಗೆ ತಂದಿದೆ. ಹೊಸ ಕಾನೂನು ಮತ್ತು ನೀತಿಯನ್ನು ಅನುಷ್ಠಾನಗೊಳಿಸಿದೆ. ಗದಗ ಜಿಲ್ಲೆಯ ಭೀಷ್ಮ ಕೆರೆ ಪ್ರವಾಸಿ ತಾಣದಲ್ಲಿ 62.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಪ್ರವಾಸಿ ಸ್ನೇಹಿ ಸಂಕೀರ್ಣ ನಿರ್ಮಿಸಲು ಅನುದಾನ ಬಿಡುಗಡೆ ಮಾಡಲಾಗಿದೆ. ಗದಗ ಶಹರದಲ್ಲಿ ತ್ರೀ ಸ್ಟಾರ್ ಹೋಟೆಲ್ ಕಾಮಗಾರಿಗೆ 9 ಕೋಟಿ, ನಗರದಲ್ಲಿ ಕ್ಯಾಟರಿಂಗ್, ಹಾಸ್ಪಿಟ್ಯಾಲಿಟಿ ಮತ್ತು ಹೋಟೆಲ್ ಮ್ಯಾನೇಜ್‌ಮೆಂಟ್ ಸಂಸ್ಥೆ ನಿರ್ಮಾಣಕ್ಕೆ 8 ಕೋಟಿ, ಮಹಾಲಿಂಗಪುರ ಗ್ರಾಮದ ಕಪ್ಪತಗುಡ್ಡದಲ್ಲಿ ಪರಿಸರ ಪ್ರವಾಸೋದ್ಯಮ ಶಿಬಿರಕ್ಕೆ 7 ಕೋಟಿ, ಸೇರಿದಂತೆ ವಿವಿಧ ಒಟ್ಟು 22 ಕಾಮಗಾರಿಗಳಿಗೆ 49.35 ಕೋಟಿ ಅನುದಾನ ಮಂಜೂರಾಗಿದ್ದು ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿವೆ ಎಂದರು.

ಇಂದು 78ನೇ ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ ಎಲ್ಲ ಯೋಜನೆಗಳನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಹಾಗೂ ತ್ವರಿತಗತಿಯಲ್ಲಿ ಜಾರಿಗೊಳಿಸಲಾಗುತ್ತಿದೆ. ಜಿಲ್ಲೆಯ ಜನತೆಯ ಆರೋಗ್ಯ ರಕ್ಷಣೆ ಹಾಗೂ ಜಿಲ್ಲೆಯ ಮೂಲಭೂತ ಸೌಲಭ್ಯಗಳ ಅಭಿವೃದ್ಧಿ ಜಿಲ್ಲಾಡಳಿತದ ಮುಖ್ಯ ಉದ್ದೇಶವಾಗಿದೆ. ಈ ದಿಸೆಯಲ್ಲಿ ಜಿಲ್ಲೆಯ ಜನತೆಯ ಸಹಕಾರ ಅಪೇಕ್ಷಿಸುತ್ತಾ ಜಿಲ್ಲೆಯ ಜನತೆಗೆ ಮತ್ತೊಮ್ಮೆ ಸ್ವಾತಂತ್ರ್ಯೋತ್ಸವದ ದಿನಾಚರಣೆಯ ಶುಭಾಶಯಗಳನ್ನು ತಿಳಿಸುತ್ತೇನೆ ಎಂದು ಸಚಿವ ಎಚ್.ಕೆ.ಪಾಟೀಲ ಶುಭ ಕೋರಿದರು.

ಸಮಾರಂಭದಲ್ಲಿ ವಿಧಾನಪರಿಷತ್ ಸದಸ್ಯ ಎಸ್.ವಿ.ಸಂಕನೂರ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ .ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರುಗಳು, ಸಾರ್ವಜನಿಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ನಗರಸಭೆಯಲ್ಲಿ ಸ್ವಾತಂತ್ರ್ಯೋತ್ಸವ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ - ಬೆಟಗೇರಿ ನಗರಸಭೆ ಆವರಣದಲ್ಲಿ 78ನೇ ಸ್ವಾತಂತ್ರ್ಯೋತ್ಸವ ಧ್ವಜಾರೋಹಣವನ್ನು ನಗರಸಭೆ ಪೌರಾಯುಕ್ತರಾದ ಮಹೇಶ ಪೋತದಾರ ನೇರವೇರಿಸಿದರು.

ಈ ಸಂದರ್ಭದಲ್ಲಿ ಎಇಇ ಹೆಚ್.ಎ. ಬಂಡಿವಡ್ಡರ, ನಗರಸಭೆ ವ್ಯವಸ್ಥಾಪಕ ಪರಶುರಾಮ ಶೇರಖಾನೆ, ಲೇಖಾಧೀಕ್ಷಕ ಟಿ.ಎಚ್. ದ್ಯಾವನೂರ, ಡಿ.ಎಚ್. ನದಾಫ್, ಎ.ಎನ್. ಪುಣೇಕರ, ಆನಂದ, ಡಿ.ಎಚ್. ಸೀತಿಮನಿ,



ಶ್ರೀಶೈಲ ಸಂಕನಗೌಡ್ರು, ನಾಗೇಶ ಗುರಣ್ಣವರ, ಮಂಜು ಬಣಕಾರ, ರೇಣುಕಾ ಭಾಟ, ಎಸ್.ವ್ಹಿ. ತೆ-ಣಟಗಿ, ಪುಷ್ಪಾ ಕಡೇಮನಿ, ವೆಂಕಟೇಶ ಹೆಚ್.ರಾಮಗಿರಿ, ರಾಜು ಬಾಕಳೆ, ಗೋವಿಂದ ಬಳ್ಳಾರಿ, ಕೆಂಚಪ್ಪ ಪೂಜಾರ, ಚಂದ್ರು ಹಾದಿಮನಿ, ಸುಷ್ಮಾ ಗುಡಿ, ಸಿ.ಬಿ. ಆರಾಧ್ಯಮಠ, ಎಂ.ಎ. ಮಕಾನದಾರ, ಮುತ್ತು ಹೂಗಾರ, ಸಂಜಯ ಅಗಸಿಮನಿ, ರಮೇಶ ನಾಗಲೀಕರ ಉಪಸ್ಥಿತರಿದ್ದರು.

## ಸಮೃದ್ಧ ರಾಷ್ಟ್ರ ನಿರ್ಮಾಣದ ಸಂಕಲ್ಪ ಮಾಡೋಣ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ರಾಷ್ಟ್ರದ ಸರ್ವತೋಮುಖ ಪ್ರಗತಿಗೆ ನಮ್ಮ ಯುವಶಕ್ತಿಯ ಬಲ ಅವಶ್ಯವಿದ್ದು, ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ದೇಶಭಕ್ತಿ, ನಿಷ್ಠೆ, ಶಿಸ್ತು, ವಿಶ್ವಾಸ ಹಾಗೂ ಸ್ವಾವಲಂಬನೆಯಂತಹ ಗುಣಗಳನ್ನು ರೂಢಿಸಿಕೊಳ್ಳಬೇಕು.

ಸಾವಿರಾರು ವರ್ಷಗಳ ಗುಲಾಮಗಿರಿಯನ್ನು ಕೊಡವಿಕೊಂಡು ಲಕ್ಷಾಂತರ ಜೀವಗಳ ತ್ಯಾಗ-ಬಲಿದಾನದಿಂದ ದೊರೆತ ಸ್ವಾತಂತ್ರ್ಯವನ್ನು ರಕ್ಷಿಸಿಕೊಂಡು ಅದನ್ನು ಇನ್ನಷ್ಟು ಬಲವರ್ಧನೆಗೊಳಿಸಲು ಪ್ರತಿಯೊಬ್ಬ ಪ್ರಜೆ ಮುಂದಾಗಬೇಕೆಂದು ತಹಸೀಲ್ದಾರ ಅನಿಲ ಬಡಿಗೇರ ಹೇಳಿದರು.

ಅವರು ಗುರುವಾರ ಶಿರಹಟ್ಟಿಯ ಶ್ರೀ ಎಸ್.ಎಂ. ಡಬಾಲಿ ತಾಲೂಕಾ ಕ್ರೀಡಾಂಗಣದಲ್ಲಿ ತಾಲೂಕಾಡಳಿತದ ವತಿಯಿಂದ ಆಯೋಜಿಸಿದ್ದ 78ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಭಾರತೀಯರ ಉದಾರತೆಯನ್ನು ಚೆನ್ನಾಗಿ ಅರಿತಿದ್ದ ಆಂಗ್ಲರು ತಮ್ಮ ಕುಟಿಲ ನೀತಿಯ ಒಳಸಂಚಿನಿಂದ ಧರ್ಮ, ಸಂಸ್ಕೃತಿ, ಭಾಷೆಯ ಆಧಾರದ ಮೇಲೆ ದೇಶೀಯರನ್ನು ವಿಘಟಿಸಿದರು.

ಇದನ್ನು ಗಮನಿಸಿದ ಅನೇಕ ಮಹನೀಯರು ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ತಮ್ಮ ಜೀವವನ್ನೇ ಮುಡುಪಾಗಿಟ್ಟಿದ್ದರು. ಇಂತಹವರನ್ನು ಇಂದಿನ ದಿವಸ ನಾವೆಲ್ಲರೂ ಸ್ಮರಿಸಬೇಕು. ಜಾತಿ, ಧರ್ಮ, ಭಾಷೆಗಳನ್ನು ಮೀರಿ ಸುಖ-ಶಾಂತಿ ಹಾಗೂ ಸಮೃದ್ಧ ರಾಷ್ಟ್ರ ನಿರ್ಮಾಣಕ್ಕಾಗಿ ನಾವೆಲ್ಲರೂ ಸಂಕಲ್ಪ ಮಾಡೋಣ ಎಂದರು.

ಶಾಸಕ ಚಂದ್ರು ಲಮಾಣಿ ಅಧ್ಯಕ್ಷತೆ ವಹಿಸಿದ್ದರು. ಸಿಪಿಐ ನಾಗರಾಜ ಮಾಡಳ್ಳಿ, ತಾ.ಪಂ ಇಓ ಎಸ್.ಎಸ್. ಕಲ್ಮನಿ, ಬಿಇಓ ಎಚ್.ಎನ್. ನಾಯಕ, ಪ.ಪಂ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ಎಡಿಎ ರೇವಣೆಪ್ಪ ಮನಗೂಳಿ, ಆರ್‌ಎಫ್‌ಓ ಕೌಶಿಕ ದಳವಾಯಿ, ರಾಮಪ್ಪ ಪೂಜಾರ, ಎಂ.ಕೆ. ಲಮಾಣಿ, ನಾಗರಾಜ ಲಕ್ಕುಂಡಿ, ಹೊನ್ನಪ್ಪ ಶಿರಹಟ್ಟಿ, ಫಕ್ಕೀರೇಶ ರಟ್ಟಿಹಳ್ಳಿ, ಅಶರತ ಢಾಲಾಯತ, ಗೂಳಪ್ಪ ಕರಿಗಾರ, ಎಚ್.ಆರ್. ಬೆನಹಾಳ, ಎಚ್.ಎಂ. ದೇವಗಿರಿ, ನಂದಾ ಪಲ್ಲೇದ, ಶ್ರೀನಿವಾಸ ಬಾರಬಾರ, ಅಕ್ಬರ ಯಾದಗಿರಿ, ಬಸವರಾಜ ಕಾತರಾಳ ಮುಂತಾದವರು ಉಪಸ್ಥಿತರಿದ್ದರು.

## ಸ್ವಾತಂತ್ರ್ಯ ಸೇನಾನಿಗಳ ಕುರಿತು ಅರಿವು ಮೂಡಲಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಾರತದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹಾನ್ ನಾಯಕರು ಮತ್ತು ಯೋಧರ ಕುರಿತಂತೆ ಮುಂದಿನ ಪೀಳಿಗೆಗೆ ಅರಿವು ಮೂಡಿಸುವ ಕೆಲಸ ಆಗಬೇಕಿದೆ ಎಂದು ಕಾರವಾರ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಕೆಎಸ್‌ಎಂಸಿಎ ಅಧ್ಯಕ್ಷರೂ ಆದ ಸತೀಶ ಕೃಷ್ಣ ಸೈಲ್ ಅಭಿಪ್ರಾಯಪಟ್ಟರು.

ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯೂನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ ಸಂಸ್ಥೆಯಲ್ಲಿ ನಡೆದ 78ನೇ ಸ್ವಾತಂತ್ರ್ಯ ದಿನಾಚರಣೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎರಡು ಶತಮಾನಗಳಿಗೂ ಹೆಚ್ಚು ಕಾಲ ಬ್ರಿಟೀಷರ ದಬ್ಬಾಳಿಕೆಗೆ ಭಾರತ ನಲುಗಿ ಹೋಗಿತ್ತು. ರಾಷ್ಟ್ರಪಿತ ಮಹಾತ್ಮಾಗಾಂಧಿ ರವರ ನೇತೃತ್ವದಲ್ಲಿ ಅಸಂಖ್ಯಾತ ನಾಯಕರು ಮತ್ತು ಯೋಧರು ಮಾಡಿದ ತ್ಯಾಗ



ಮತ್ತು ಬಲಿದಾನದಿಂದಾಗಿ ನಮಗೆ ಸ್ವಾತಂತ್ರ್ಯ ದೊರಕಿದೆ. ಈ ಕುರಿತಂತೆ ಮುಂದಿನ ಪೀಳಿಗೆಗೆ ಅರಿವು ಮೂಡಿಸುವ ಕೆಲಸ ಆಗಬೇಕಿದೆ. ಅಂತೆಯೇ ಭಾರತದ ಸಂವಿಧಾನದ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್‌ರವರ ಚಿಂತನೆಗಳ ಕುರಿತಂತೆಯೂ ಅರಿವು ಮೂಡಿಸಬೇಕಿದೆ ಎಂದರು.

ಸಮಾರಂಭದಲ್ಲಿ ಉಪಸ್ಥಿತರಿದ್ದ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಮೊಹಮ್ಮದ್ ಅತೀಕುಲ್ಲಾ ಶರೀಫ್ ಮಾತನಾಡಿ, ಭಾರತವು ಸಾವಿರಾರು ವರ್ಷಗಳಿಂದಲೂ ಸಾಂಸ್ಕೃತಿಕ ಹಿರಿಮೆಗೆ ಪ್ರಸಿದ್ಧವಾಗಿದೆ. ಇಡೀ ವಿಶ್ವದಲ್ಲಿಯೇ ಭಾರತದ ಸಂಸ್ಕೃತಿಗೆ ಅಮೂಲ್ಯ ಸ್ಥಾನ ದೊರೆತಿದೆ. ಇಂಥಹ ನಮ್ಮ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹಾನ್ ಚೇತನರು ನಡೆದುಬಂದ ಹಾದಿಯ ಕುರಿತಂತೆ ಮತ್ತು ಅವರ ತತ್ವಾದರ್ಶಗಳನ್ನು ನಾವು ಅನುಸರಿಸುವ ಮೂಲಕ ಅವರಿಗೆ ಗೌರವ ಸಲ್ಲಿಸಬೇಕು ಎಂದು ತಿಳಿಸಿದರು.

ಸಮಾರಂಭದಲ್ಲಿ ಸಂಸ್ಥೆಯ ಉಪ ಪ್ರಧಾನ ವ್ಯವಸ್ಥಾಪಕರಾದ ಪಿ.ಎಸ್. ನಂದೀಶ ಮತ್ತು ಇತರೆ ಅಧಿಕಾರಿಗಳು, ಸಿಬ್ಬಂದಿ ಭಾಗವಹಿಸಿದ್ದರು.

### ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳನ್ನು ಸನ್ಮಾನಿಸಿದ ಕೃಷ್ಣಗೌಡ ಪಾಟೀಲ್

# ವೈದ್ಯರ, ಸಿಬ್ಬಂದಿಗಳ ಸೇವೆ ಅನನ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಸಮುದಾಯದಲ್ಲಿ ವೈದ್ಯಕೀಯ ವೃತ್ತಿ ಪವಿತ್ರ ಮತ್ತು ಶ್ರೇಷ್ಠತೆಯನ್ನು ಪಡೆದಿದ್ದು, ಅವರು ನಮ್ಮ ಬದುಕಿನ ಸಂಜೀವಿನಿ ಆಗಿದ್ದಾರೆ. ಅವರು ಸೇವಾಭಾವನೆಯ ಮೂಲಕ ಸಮಾಜದ ಸೇವೆ ಮಾಡುತ್ತಿದ್ದು, ಅವರ ಸೇವೆ ಗುರುತಿಸಿ ಗೌರವಿಸುವ ಕಾರ್ಯ ಮಾಡಿರುವ ಇಂಟರ್‌ನ್ಯಾಶನಲ್ ಹ್ಯೂಮನ್ ರೈಟ್ಸ್ ಮತ್ತು ಪ್ರೆಸ್ ಅಸೋಸಿಯೇಶನ್ ಕಾರ್ಯ ಶ್ಲಾಘನೀಯವಾಗಿದೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಯುವ ಸಮಿತಿಯ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ್ ಅಬಿಪ್ರಾಯಪಟ್ಟರು.

ಬೆಟಗೇರಿಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 78ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಅಂಗವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳಿಗೆ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೊರೋನಾ ಸಮಯದಲ್ಲಿ ತಮ್ಮ ಜೀವ ಮತ್ತು ತಮ್ಮ ಪರಿವಾರದ ಬಗ್ಗೆ ಲೆಕ್ಕಿಸದೇ ಹಗಲಿರುಳು




ಶ್ರಮಿಸಿರುವ ವೈದ್ಯರು ಮತ್ತು ನರ್ಸ್‌ಗಳ ಪವಿತ್ರ ಸೇವೆಯನ್ನು ಗುರುತಿಸಲು ಇದಕ್ಕಿಂತ ಶ್ರೇಷ್ಠ ದಿನ ಮತ್ತೊಂದಿಲ್ಲ ಎಂದರು.

ಇಂಟರ್‌ನ್ಯಾಶನಲ್ ಹ್ಯೂಮನ್ ರೈಟ್ಸ್ ಮತ್ತು ಪ್ರೆಸ್ ಅಸೋಸಿಯೇಶನ್ ರಾಜ್ಯಾಧ್ಯಕ್ಷ ನದ್ದಿಮುಲ್ಲಾ ಮಾತನಾಡಿ, ಅಸೋಸಿಯೇಶನ್ ಸಾಮಾಜಿಕ ಪ್ರಕ್ರಿಯೆಗೆ ಮೀಸಲಾಗಿದೆ. ವೈದ್ಯರ, ಸಿಬ್ಬಂದಿಗಳ ಸೇವಾಭಾವನೆ ಗುರುತಿಸಿ ಅವರನ್ನು ಸಮಾಜಕ್ಕೆ ಪರಿಚಯಿಸುವ ಕಾರ್ಯ ನಮ್ಮದಾಗಿದೆ ಎಂದು ಹೇಳಿದರು.

ಅಸೋಸಿಯೇಶನ್ ಸಂಘಟಕ ಇಮಾಮಹುಸೇನ ನಮಾಜಿ ಮಾತನಾಡಿ, ಸಮುದಾಯದಲ್ಲಿ ನಿಸ್ವಾರ್ಥ ಸೇವಾಭಾವನೆಯಿಂದ ದುಡಿಯುವ ವೈದ್ಯಕೀಯ ಸಮೂಹದ ಕಾರ್ಯ ಶ್ರೇಷ್ಠ ಮತ್ತು ಅಮೂಲ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಎಸ್.ಎಮ್. ಓಣಿ, ಡಾ. ಮೆಹರುಸಹ ಮುಲ್ಲಾ, ಡಾ. ಶ್ವೇತಾ, ಎಸ್.ಎನ್. ಲಿಂಗದಾಳ, ಜ್ವಾಯಿಸಿ ಗೌಡರ, ಸುನಂದಾ, ಶಿಶ್ವಿನಹಳ್ಳಿ, ಬಿ.ಸಿ. ಹಿರೇಹಾಳ, ಎಸ್.ಬಿ. ಗುಡ್ಡದ, ಮಂಜುನಾಥ ಬಂಡಾರಿ, ನಾಗರಾಜ ಜೋಶಿ ಸೇರಿದಂತೆ ಹಲವರಿಗೆ ವೈದ್ಯಕೀಯ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಉಸಮಾನಸಾಬ ಮಾಳೆಕೊಪ್ಪ, ರಮೇಶ, ಮಂಜುನಾಥ ನಾಗರಾಳ, ಮೆಹಬೂಬ ಕುರ್ತಕೋಟಿ, ಬಾಲರಾಜ ಅರಬರ, ಸುರೇಂದ್ರಸಿಂಗ್ ಕಾಟೇವಾಲ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka